ವಿಜಯಪುರ | ಸಂಪುಟ 02 | ಸಂಚಿಕೆ 104 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಜೂನ್ 13, 2024



"ಪರದೆಯ ಮೇಲೆ ಅನ್ಯಾಯದ ವಿರುದ್ಧ ಹೋರಾಡುವ ಹೀರೊ ದರ್ಶನ್, ಕೊಲೆಯಂಥ–'ಹ ಹೇಯ ಕೃತ್ಯದಲ್ಲಿ ಪಾಲ್ಗೊಳ್ಳುವುದರ ಮೂಲಕ ತಾನು ನಿಜ ಜೀವನದಲ್ಲಿ ಜೀರೋ ಎನ್ನುವುದನ್ನು ತೋರಿಸಿಕೊಟ್ಟಿದ್ದಾನೆ. ಈ ದುಷ್ಕೃತ್ಯದಲ್ಲಿ ಪಾಲ್ಗೊಂಡ ಎಲ್ಲರಿಗೂ ಕಠಿಣ ಶಿಕ್ಷೆ ಆಗಬೇಕು."

– ಸಂಗಮೇಶ ಬಬಲೇಶ್ವರ

ಮುಖ್ಯ ವಕ್ತಾರರು, ಕೆಪಿಸಿಸಿ ಪ್ರಚಾರ ಸಮಿತಿ

ಪೋಕ್ಸೋ ಪ್ರಕರಣ | ಸಂತ್ರಸ್ತೆಯ ಸಹೋದರನಿಂದ ಅರ್ಜಿ | ವಿಚಾರಣೆಗೆ ಹಾಜರಾಗಲು ಮಾಜಿ ಸಿಎಂ ಯಡಿಯೂರಪ್ಪಗೆ ಸಿಐಡಿ ನೋಟಿಸ್

# ಯಡಿಯೂರಪ್ಪ ಬಂಧನ ಕೋರಿ ಹೈಕೋರ್ಟ್‌ಗೆ ರಿಟ್ ಅರ್ಜಿ!

ಬೆಂಗಳೂರು: ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಯಡಿಯೂರಪ್ಪ ವಿರುದ್ಧ ಲೋಕಸಭಾ ಚುನಾವಣೆಗೂ ಮುನ್ನಾ ದಾಖಲಾಗಿದ್ದ ಪೋಕ್ಸೋ ಪ್ರಕರಣದಲ್ಲಿ ಅವರನ್ನು ಬಂಧಿಸಬೇಕೆಂದು ಕೋರಿ ಸಂತ್ರಸ್ತೆಯ ಸಹೋದರ ಹೈಕೋರ್ಟ್‌ಗೆ ಬುಧವಾರ ಅರ್ಜಿ ಸಲ್ಲಿಸಿದ್ದಾರೆ.

ಬಿಜೆಪಿ ಹಿರಿಯ ನಾಯಕ ಯಡಿಯೂರಪ್ಪ ವಿರುದ್ಧ ಕೇಸ್ ದಾಖಲಿಸಿ ಹಲವು ತಿಂಗಳು ಕಳೆದಿದ್ದರೂ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅವರು ಆರೋಪಿಸಿದ್ದಾರೆ.

ಸಹಾಯಕ್ಕಾಗಿ ಮಾಜಿ ಮುಖ್ಯಮಂತ್ರಿಯ ಮನೆಗೆ ತೆರಳಿದಾಗ ಅವರು ತನ್ನ ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನವೆಸಗಿದ್ದಾರೆ ಎಂದು ಆರೋಪಿಸಿ ಸಂತ್ರಸ್ತೆ ತಾಯಿ ಮಾರ್ಚ್ ತಿಂಗಳಲ್ಲಿ ಎಫ್‌ಐಆರ್ ದಾಖಲಿಸಿದ್ದರು. ಫೆಬ್ರವರಿಯಲ್ಲಿ ಮಗಳ ಮೇಲೆ ದೌರ್ಜನ್ಯ ಎಸಗಲಾಗಿದೆ ಎಂದು ಅವರು ದೂರಿದ್ದ ಸಂತ್ರಸ್ತೆಯ ಮೇ 26 ರಂದು ಮೃತಪಟ್ಟಿದ್ದರು.

ಯಡಿಯೂರಪ್ಪ ನಿವಾಸದ ಸಿಸಿಟಿವಿ ದೃಶ್ಯಾವಳಿ ಸೀಜ್ ಮಾಡಿಲ್ಲ ಅಥವಾ ಪೋಕ್ಸೋ ಕಾಯ್ದೆಯ ಸೆಕ್ಷನ್ 41 ಎಅಡಿಯಲ್ಲಿ ಬಿಜೆಪಿಗೆ ಯಾವುದೇ ನೋಟಿಸ್ ನೀಡಿಲ್ಲ ಎಂದು ದೂರುದಾರರು ಹೇಳಿದ್ದಾರೆ.

ಈ ಹಿಂದೆ ಯಡಿಯೂರಪ್ಪ ಕೂಡ



ತಮ್ಮ ವಿರುದ್ಧದ ಪೋಕ್ಸೋ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದರು. ತಾವು ಯಾವುದೇ ಕಾನೂನು ಬಾಹಿರ ಕೃತ್ಯವೆಸಗಿಲ್ಲ, ದೂರುದಾರರಿಗೆ ದೂರು ನೀಡುವ ಅಭ್ಯಾಸವಿದೆ ಎಂದು ಅರ್ಜಿಯಲ್ಲಿ ಹೇಳಿದ್ದರು.

ಎಫ್‌ಐಆರ್ ದಾಖಲಾದ ನಂತರ ವಿಚಾರಣೆಗೆ ಹಾಜರಾಗಿದ್ದೆ. ಪೊಲೀಸರು ಧ್ವನಿ ಮಾದರಿಗಳನ್ನು ಸಂಗ್ರಹಿಸಿದ್ದರು ಆದರೆ ನನ್ನ ಹೇಳಿಕೆಯನ್ನು ದಾಖಲಿಸಿಲ್ಲ ಎಂದು ಯಡಿಯೂರಪ್ಪ ಹೇಳಿದ್ದರು. ಮಾರ್ಚ್‌ನಲ್ಲಿ ಸಂತ್ರಸ್ತೆಯ ತಾಯಿ ಹಿರಿಯ ಪೊಲೀಸ್ ಅಧಿಕಾರಿಗಳು, ರಾಜಕಾರಣಿಗಳು ಮತ್ತು ಅಧಿಕಾರಿಗಳು ಸೇರಿದಂತೆ 53 ಜನರ ವಿರುದ್ಧ ದೂರು ದಾಖಲಿಸಿದ್ದರು.

## ಯಡಿಯೂರಪ್ಪಗೆ ಸಿಐಡಿ ನೋಟಿಸ್

ಬೆಂಗಳೂರು: ತಮ್ಮ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣಕ್ಕೆ (POCSO case) ಸಂಬಂಧಿಸಿದಂತೆ ವಿಚಾರಣೆಗೆ ತನಿಖಾ ತಂಡದ ಮುಂದೆ ಹಾಜರಾಗುವಂತೆ ಬಿಜೆಪಿ ಹಿರಿಯ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರಿಗೆ ಅಪರಾಧ ತನಿಖಾ ಇಲಾಖೆ (ಸಿಐಡಿ) ನೋಟಿಸ್ ಜಾರಿ ಮಾಡಿದೆ ಎಂದು ಬುಧವಾರ ಪೊಲೀಸ್ ಮೂಲಗಳು ತಿಳಿಸಿವೆ.

ಯಡಿಯೂರಪ್ಪ ಅವರು ಸದ್ಯ ದೆಹಲಿಯಲ್ಲಿದ್ದು, ಅವರು ವಾಪಸ್ಸಾದ ನಂತರವೇ ತನಿಖಾ ತಂಡದ ಮುಂದೆ ಹಾಜರಾಗುವ ಸಾಧ್ಯತೆ ಇದೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ.




ಪ್ರಕರಣದ ಕುರಿತು ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ. ಪರಮೇಶ್ವರ್ ತನಿಖೆ ಮುಂದುವರಿದಿದ್ದು, ಪೊಲೀಸರು ಹೆಚ್ಚಿನ ಸಾಕ್ಷ್ಯಗಳನ್ನು ಸಂಗ್ರಹಿಸುತ್ತಿದ್ದಾರೆ ಎಂದು ಬುಧವಾರ ಹೇಳಿದ್ದಾರೆ.

ಈ ಹಿಂದೆ, ಪ್ರಕರಣವನ್ನು ಅಪರಾಧ ತನಿಖಾ ಇಲಾಖೆಯ (ಸಿಐಡಿ) ವಿಶೇಷ ವಿಭಾಗಕ್ಕೆ ರಾಜ್ಯ ಸರ್ಕಾರ ಹಸ್ತಾಂತರಿಸಿತ್ತು.

## ರಾಜ ನುಡಿ

ಕಣ್ಣುಗಳು ನಮ್ಮದಾದರೂ ಬೇರೆಯವರ ಕನ್ನಡಕದಿಂದ ದೃಷ್ಟಿ ಹೀನರಾಗುತ್ತೇವೆ..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 396

*ಎನ್ನ ಕ್ರಿಯಾಜ್ಞಾನದ ಕೂಟ ಮಡಕೆ ಮಣ್ಣಿನಂತಾಯಿತ್ತಯ್ಯಾ, ಭ್ರಮರ ಗಂಧದಂತಾಯಿತ್ತು ತಂದೆ. ಮಧುರ ವಾಣಿಯಂತೆ ಸರ ಶರಧಿಯಂತಾಯಿತ್ತಯ್ಯಾ. ಅಮೃತ ಅಮೃತದಂತಾಯಿತ್ತು. ಬೆಳಗಿನಂತೆ ಬಯಲು ಬೆಳಗಿನಂತಾಯಿತ್ತು. ಎಡೆ ಬಿಡುವಿಲ್ಲದೆ ಕಡೆನಡು ಮೊದಲೆನ್ನದೆ ಸಕ್ಕರೆಯ ದಂಡದಂತೆ ಆ ಗುಣವೆತ್ತಲೂ ಸರಿ,ಎಲೆ ಅಚ್ಯುತಪ್ರಿಯ, ರಾಮನಾಥಾ ನಿಮ್ಮಲ್ಲಿ ಎನಗೆ.*

12ನೇ ಶತಮಾನದ ಶರಣರಲ್ಲಿ ಅನುಭಾವವನ್ನು ಜ್ಞಾನದ ಮೂಲದಿಂದ ಅರಿತು ಅದನ್ನು ಕ್ರೀಯೆಗೆ ಒಳಪಡಿಸಿ ಗಟ್ಟಿಗೊಳಸಿಕೊಂಡಿರುವವರು ಕೆಲವರಾದರೆ, ಮತ್ತೆ ಕೆಲವರು ಕ್ರೀಯೆಯಿಂದ ಜ್ಞಾನವನ್ನು ಸಂಪಾದಿಸಿರುವರು. ಇಲ್ಲಿ ಗುಪ್ತಮಂಚಣ್ಣನವರು " ಎನ್ನ ಕ್ರಿಯಾಜ್ಞಾನದ ಕೂಟ" ಎನ್ನುವಲ್ಲಿ ಇವರು ಹೊಂದಿದ ಅನುಭಾವವು/ ಜ್ಞಾನ ಕ್ರೀಯಾಜನ್ಯವಾಗಿದೆ. ಇಲ್ಲಿ ಜ್ಞಾನ ಮತ್ತು ಕ್ರಿಯೆಗಳು ಒಂದನ್ನೊಂದು ಭಿನ್ನಭಾವದಿಂದ ನೋಡಲು ಸಾಧ್ಯವಾಗದ ರೀತಿಯಲ್ಲಿ ಸಂಗಮಿಸಿರುವುದನ್ನು ದೃಷ್ಟಾಂತಗಳ ಮೂಲಕ ಸ್ಪಷ್ಟೀಕರಿಸಿದ್ದಾರೆ. ಅದು ಮಣ್ಣಿನಿಂದ ಉಂಟಾದ ಮಡಿಕೆಯಂತೆ, ಹೇಗೆ ಮಣ್ಣು ಸಂಸ್ಕಾರಗೊಂಡು ಮಡಿಕೆಯಾಗುತ್ತದಯೋ ಹಾಗೆ ಜ್ಞಾನ ಕ್ರೀಯೆಗೆ ಒಳಪಡಬೇಕು. ಎಷ್ಟೊ ಸುವಾಸನೆ ಹೊಂದಿ ಪರಿಮಳ ಭರಿತ ಹೂವಿನ ಸಾರ್ಥಕತೆ ಯು ಬ್ರಮರದ ಸಂಪರ್ಕಕ್ಕೆ ಬಂದು ಎಲ್ಲೆಡೆ ಹಂಚುವುದರಲ್ಲಿ ಅಡಗಿದೆ. ಮತ್ತು ಮಾತು ಹಿತವಾಗಲು ಅದರೊಂದಿಗೆ ಪ್ರೀತಿ ಬೆರೆತ ಮಧುರತೆ ಬೇಕು , ಹೇಗೆ ಮಧುರತೆಯನ್ನು ಮಾತಿನಿಂದ ಬೇರ್ಪಡಿಸಲು ಸಾಧ್ಯವಿಲ್ಲವೋ ಹಾಗೆ ಜ್ಞಾನವು ಕ್ರೀಯೆಯೊಂದಿಗೆ ಸಹಜವಾಗಿ ಉತ್ಪತ್ತಿಯಾಗುತ್ತದೆ. ಅದು ಹೇಗೆ ಬೆರೆಯುತ್ತದೆಂದರೆ ಅಮೃತವು ಅಮೃತವನ್ನು ಬೆರೆತಂತೆ, ಬಯಲಿನಲ್ಲಿ ಅಡಗಿದ ಬೆಳಗಿನಂತೆ ಭಿನ್ನಭಾವವಿಲ್ಲದೆ ಬೆರೆತು ಹೊಗುತ್ತದೆ. ಕಬ್ಬನ್ನು ಯಾವಕಡೆಯಿಂದಲೂ ಜಗಿದರೂ ಸಿಹಿಯೇ ಬರುವಂತೆ ಗುಪ್ತ ಮಂಚಣ್ಣ ನವರ ಅಂಗ ಲಿಂಗದೊಂದಿಗೆ ಬೆರೆತುಹೋಗಿದೆ. ಇದು ಅಂಗ ಭಾವ ಅಳಿಯುವ ಪರಿಯಾಗಿದೆ..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಬಾಲಕಾರ್ಮಿಕ ನಿರ್ಮೂಲನೆಗೆ ಜಾಗೃತಿ ಅಗತ್ಯ :ಡಿಸಿ ಟಿ.ಭೂಬಾಲನ್

ಉದಯರಶ್ಮಿ ನ್ಯೂಸ್

ವಿಜಯಪುರ: ಬಾಲಕಾರ್ಮಿಕತೆ ಅನಿಷ್ಠ ಪದ್ದತಿಯಾಗಿದ್ದು, ಇದರ ನಿರ್ಮೂಲನೆಗೆ ಪರಿಣಾಮಕಾರಿ ಜಾಗೃತಿ ಅಗತ್ಯವಾಗಿದ್ದು, ಎಲ್ಲಾ ಅಧಿಕಾರಿಗಳು, ಸಂಘ– ಸಂಸ್ಥೆಗಳು ಈ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ಕರೆ ನೀಡಿದರು.

ಬುಧವಾರ ನಗರದ ಜಿಲ್ಲಾಡಳಿತ,




ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ ಇವರ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬಾಲಕಾರ್ಮಿಕ ಪದ್ಧತಿ ನಿಷೇಧಿಸಲಾಗಿದೆ. ಇದೊಂದು ಅಪರಾಧವಾಗಿದೆ ಎಂಬುದರ ಕುರಿತು ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸಿ, ಸಂಪೂರ್ಣ ನಿರ್ಮೂಲನೆಗೆ ಕೈಜೋಡಿಸಬೇಕು. ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದ ಸಂದರ್ಭದಲ್ಲಿ ಮಕ್ಕಳ ಸಹಾಯವಾಣಿ  1098ಕ್ಕೆ ಸಾರ್ವಜನಿಕರು ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ. ಕಾರ್ಮಿಕ ಇಲಾಖೆಯು ಸೇರಿದಂತೆ ಅಧಿಕಾರಿಗಳು ದಾಳಿ ಮಾಡಿದ ಸಂದರ್ಭದಲ್ಲಿ ರಕ್ಷಿಸಿದ ಮಕ್ಕಳನ್ನು ಬಾಲಮಂದಿರಕ್ಕೆ ದಾಖಲಿಸಿ ಅವರ ಪುನರ್ವಸತಿ ಕಲ್ಪಿಸಿ ಅವರಿಗೆ ಪೂರಕವಾದ ಶಿಕ್ಷಣ, ಕೌಶಲಗಳ ತರಬೇತಿ ಒದಗಿಸಲಾಗುತ್ತಿದೆ ಎಂದು ಹೇಳಿದರು.

ಬಾಲಕಾರ್ಮಿಕ ಪದ್ದತಿ ನಿರ್ಮೂಲನೆಗಾಗಿ ಶಾಲಾ ಮುಖ್ಯೋಪಾಧ್ಯಯರು, ಶಿಕ್ಷಕರ ಪಾತ್ರ ಬಹಳ ಪ್ರಮುಖವಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿ ಕ್ರೋಢೀಕರಿಸಿಕೊಂಡು ಆ ಬಗ್ಗೆ ಸಂಬಂಧಿಸಿದವರಿಗೆ ಮಾಹಿತಿ ನೀಡಬೇಕು. ಬಾಲಕಾರ್ಮಿಕ ಕಾರ್ಮಿಕ ಅಧಿಕಾರಿಗಳು ಸೇರಿದಂತೆ ಇತರೆ ಇಲಾಖೆಯ ಅಧಿಕಾರಿಗಳು ಶಾಲಾ ಮುಖ್ಯಸ್ಥರೊಂದಿಗೆ ಸಮನ್ವಯ ಸಾಧಿಸಬೇಕು. ವಲಸೆ ಕಾರ್ಮಿಕ ಕುಟುಂಬಗಳ ಬಗ್ಗೆ ಮಾಹಿತಿ ಪಡೆದುಕೊಂಡು ಅವರ ಮಕ್ಕಳ ಶಿಕ್ಷಣ, ಮೂಲಭೂತ ಹಕ್ಕುಗಳ ಸಂರಕ್ಷಣೆ ಮಾಡಬೇಕು. ಮಕ್ಕಳ ಭವಿಷ್ಯ ಸುಂದರವಾಗಿಸಲು ಬಾಲಕಾರ್ಮಿಕತೆ ಪಿಡುಗನ್ನು ತೊಲಗಿಸಬೇಕು.

ಕಾರ್ಮಿಕ ನಿರೀಕ್ಷಕರಾದ ಜಗದೇವಿ ಸಜ್ಜನ ಬಾಲಕಾರ್ಮಿಕ ವಿರೋಧಿ ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾದ ರಾಮನಗೌಡ ಹಟ್ಟಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಯೋಜನಾ ನಿರ್ದೇಶಕರಾದ ನೀಲಮ್ಮಾ ಖೇಡಗಿ, ಜಿಲ್ಲಾ ಕಾರ್ಮಿಕ ಇಲಾಖೆ ಅಧಿಕಾರಿ ಎಸ್.ಜಿ. ಕೈನೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾಕ್ಷಿ ಜಾನಕಿ, ಅನೌಪಚಾರಿಕ ಶಿಕ್ಷಣ ಸಂಸ್ಥೆಯ ನಿರ್ದೇಶಕ ಫಾದರ್ ಟಿಯೋಲ್ ಮಚಾದೋ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಎಸ್.ಜಿ. ಕುಲಕರ್ಣಿ ಉಪಸ್ಥಿತರಿದ್ದರು.

## ಕರ್ತವ್ಯ ಲೋಪ: ಪ್ರಭಾರ ಪಿಡಿಓ ಅಮಾನತು

ಉದಯರಶ್ಮಿ ನ್ಯೂಸ್

ಇಂಡಿ: ಕರ್ತವ್ಯ ಲೋಪ ಹಿನ್ನಲೆ ಪ್ರಭಾರ ಪಿಡಿಓನ್ನು ಜಿಲ್ಲಾ ಪಂಚಾಯತ ಸಿಇಓ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯ ಇಂಡಿ ತಾಲ್ಲೂಕಿನ ಹಂಜಗಿ ಗ್ರಾಮ ಪಂಚಾಯತಿ ಪ್ರಭಾರ ಹಾಗೂ ಹಿರೇಬೇವನೂರ ಗ್ರಾಮ ಪಂಚಾಯತಿ ಪಿಡಿಓ ರವಿ ಕರ್ಜಗಿ ಅಮಾನತುಗೊಂಡವರು. ಇನ್ನು ನಮ್ಮ ಭೂಮಿ ನಮ್ಮ ತೋಟ ಯೋಜನೆಯಡಿಯಲ್ಲಿ ಕರ್ತವ್ಯ ಲೋಪ ಎಸಗಿದ್ದಾರೆ ಎಂದು ಮೇಲ್ನೋಟಕ್ಕೆ ಕಂಡುಬಂದಿದೆ. ಅದಕ್ಕಾಗಿ ರವಿ ಅವರನ್ನು ಅಮಾನತುಗೊಳಿಸಿ ಮುಂದಿನ ಶಿಸ್ತು ಕ್ರಮಕ್ಕೆ ಜಿಲ್ಲಾ ಪಂಚಾಯತ ಸಿಇಓ ರಿಷಿ ಆನಂದ ಆದೇಶ ಹೊರಡಿಸಿದ್ದಾರೆ.

ಜಿಪಂ ಸಿಇಓ ರಿಷಿ ಆನಂದ ಅಧಿಕಾರಿಗಳಿಗೆ ಸೂಚನೆ | ಪ್ರವಾಹ ಕಾಮಗಾರಿ ಪರಿಶೀಲನೆ

## ಡೋಣಿ ಪ್ರವಾಹ ನಿರ್ವಹಣೆಗೆ ಮುಂಜಾಗ್ರತ ಕ್ರಮ ಕೈಗೊಳ್ಳಿ

ಉದಯರಶ್ಮಿ ನ್ಯೂಸ್

ವಿಜಯಪುರ: ಹೆಗಡಿಹಾಳ, ಸಾತಿಹಾಳ ಹಾಗೂ ಯಾಳವಾರ ಗ್ರಾಮಗಳಲ್ಲಿ ಡೋಣಿ ನದಿಯಿಂದ ಉಂಟಾಗುವ ಪ್ರವಾಹ ನಿರ್ವಹಣೆಗೆ ಅಗತ್ಯ ಕ್ರಮಕೈಗೊಳ್ಳುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅಧಿಕಾರಿಗಳಿಗೆ ಸೂಚಿಸಿದರು.



ಬುಧವಾರ ಜಿಲ್ಲೆಯ ಹೆಗಡಿಹಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಉಕುಮನಾಳ ಗ್ರಾಮದಲ್ಲಿ ಈ ಹಿಂದೆ ಪ್ರವಾಹ ಬಂದ ಹಿನ್ನೆಲೆಯಲ್ಲಿ ಲೋಕೋಪಯೋಗಿ ಹಾಗೂ ಗ್ರಾಮ ಪಂಚಾಯತಿ ವತಿಯಿಂದ ಪ್ರವಾಹವು ಸರಾಗವಾಗಿ ಸಾಗುವಂತೆ ಕೈಗೊಂಡ ಕಾಮಗಾರಿಗಳನ್ನು ಪರಿಶೀಲಿಸಿದರು.

ಈ ಬಾರೀ ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಅತೀವೃಷ್ಟಿಯಿಂದ ಪ್ರವಾಹ ಬರುವ ಸಂಭವವಿದ್ದು, ಪ್ರವಾಹ ನಿಯಂತ್ರಣದ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರು ಪೂರೈಸುವ ಕುಡಿಯುವ ನೀರಿನ ಟ್ಯಾಂಕ್ ಸ್ವಚ್ಛಗೊಳಿಸುವುದು, ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕಾರ್ಯಾತ್ಮಕ ಸ್ಥಿತಿಯಲ್ಲಿಡಬೇಕು ಹಾಗೂ ಗ್ರಾಮದಲ್ಲಿನ ಚರಂಡಿಗಳನ್ನು ಸ್ವಚ್ಛಗೊಳಿಸಬೇಕು. ಸಾರ್ವಜನಿಕರಿಗೆ ಕುಡಿಯಲು ಯೋಗ್ಯವಾದ ನೀರನ್ನು ಕ್ಲೋರೀಕರಣಗೊಳಿಸಿ ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಳಿಕ ದೇವರ ಹಿಪ್ಪರಗಿ ತಾಲೂಕಿನ ಸಾತಿಹಾಳ ಗ್ರಾಮದ ಡೋಣಿ ನದಿಯ ಸೇತುವೆ, ಗ್ರಾಮದಲ್ಲಿನ ಚರಂಡಿಗಳು, ನೀರಿನ ಟ್ಯಾಂಕ್, ಗ್ರಾಮದ ರಸ್ತೆಗಳು ಮತ್ತು ಯಾಳವಾರ ಗ್ರಾಮದ ಡೋಣಿ ನದಿ ಸೇತುವೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಳೆಯಿಂದಾಗಿ ಡೋಣಿ ನದಿ ತುಂಬಿ ಹರಿಯುತ್ತಿದ್ದು, ನೀರು ಸರಾಗವಾಗಿ ಸಾಗಲು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಸೂಚಿಸಿದರು.

ಡೋಣಿ ನದಿ ನದಿ ದಂಡೆಯಲ್ಲಿರುವ ಎಲ್ಲ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಗ್ರಾಮ ಪಂಚಾಯತಿ ವತಿಯಿಂದ ಡಂಗೂರ ಸಾರಿ ಪ್ರವಾಹ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದರು. ಗ್ರಾಮ ಪಂಚಾಯತಿ ಮಟ್ಟದ ವಿಪತ್ತು ನಿರ್ವಹಣಾ ಸಭೆಯನ್ನು ಆದ್ಯತೆ ಮೇರೆಗೆ ಏರ್ಪಡಿಸಿ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ನಂತರ ದೇವರ ಹಿಪ್ಪರಗಿ ತಾಲೂಕ ಪಂಚಾಯಿತಿಗೆ ಭೇಟಿ ನೀಡಿ, ಹಳೆಯ ಪ್ರವಾಸಿ ಮಂದಿರದಲ್ಲಿ ತಾಲೂಕ ಪಂಚಾಯತ ಕಚೇರಿ ಕಾರ್ಯ ನಿರ್ವಹಿಸುತಿದ್ದು, ಹೊಸ ತಾಲೂಕು ಪಂಚಾಯಿತಿ ಕಚೇರಿ ನಿರ್ಮಾಣಕ್ಕಾಗಿ ಸ್ಥಳ ಗುರುತಿಸಿ ಜಿಲ್ಲಾ ಪಂಚಾಯಿತಿಗೆ ವರದಿ ನೀಡುವಂತೆ ತಾಲುಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ರಾಮು ಅಗ್ನಿ ಅವರಿಗೆ ಸೂಚಿಸಿದರು.

ಪ್ರತಿ ತಿಂಗಳ ಮೊದಲನೇ ಶನಿವಾರವನ್ನು "ಸ್ವಚ್ಛ ಶನಿವಾರ" ಎಂಬ ಪರಿಕಲ್ಪನೆ ಇಟ್ಟುಕೊಂಡು ತಾಲೂಕ ಪಂಚಾಯಿತಿ ಒಳಾಂಗಣ ಹಾಗೂ ಹೊರಾಂಗಣ ಆವರಣಗಳನ್ನು ಸ್ವಚ್ಛಗೊಳಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ. ಹೊಂಗಯ್ಯ, ದೇವರ ಹಿಪ್ಪರಗಿ ತಾಲೂಕಿನ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮು ಜಿ ಅಗ್ನಿ, ಸಹಾಯಕ ನಿರ್ದೇಶಕರು (ಪಂಚಾಯತ್ ರಾಜ್) ಶಿವಾನಂದ ಮೂಲಿಮನಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಸತೀಶ ಪಾಟೀಲ ಮತ್ತು ಸೆಕ್ಷನ್ ಅಧಿಕಾರಿ ಎಚ್. ಎಮ್. ಸಾರವಾಡ, ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಜಿ. ವಾಯ್. ಮುರಾಳ, ಬಸವನ ಬಾಗೇವಾಡಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರಾಠೋಡ, ಹೆಗಡಿಹಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸರಿತಾ ಟಿ. ನಾಯಕ, ಸಾತಿಹಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಂ. ಎನ್. ಕತ್ತಿ, ಯಾಳವಾರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಲ್ಲು ಮಸಳಿ, ಗ್ರಾಮ ಪಂಚಾಯತಿಯ ಸರ್ವ ಸದಸ್ಯರು, ತಾಲೂಕ ಪಂಚಾಯತ ಸಂಯೋಜಕರಾದ ರಾಘವೇಂದ್ರ ಭಜಂತ್ರಿ, ಸಿದ್ದಪ್ಪ ಕಾಂಬಳೆ ಮತ್ತು ಗ್ರಾಮ ಪಂಚಾಯತ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮುಳವಾಡ ಏತ ನೀರಾವರಿ ಮುಖ್ಯ ಕಾಲುವೆಯಲ್ಲಿ ನಡೆದಿರುವ ಕಳಪೆ ಕಾಮಗಾರಿ

## ಕಳಪೆ ಕಾಮಗಾರಿ: ತಪ್ಪಿತಸ್ಥರ ಮೇಲೆ ಕ್ರಮಕ್ಕೆ ಜಯ ಕರ್ನಾಟಕ ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ಮುಳವಾಡ ಏತ ನೀರಾವರಿ ಮುಖ್ಯ ಕಾಲುವೆಯಲ್ಲಿ ನಡೆದಿರುವ ಕಳಪೆ ಕಾಮಗಾರಿಯ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಕ್ರಮಕ್ಕೆ ಆಗ್ರಹ ಜಯ ಕರ್ನಾಟಕ ಸಂಘಟನೆಯ ವತಿಯಿಂದ ವಿಜಯಪುರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.



ಈ ವಿಷಯ ಕುರಿತು ರಾಜ್ಯ ಸಂಘಟನಾ ಕಾರ್ಯದರ್ಶಿ ರಾಕೇಶ ಕಲ್ಲೂರ ಅವರು ಮಾತನಾಡಿ, ತಾಳಿಕೋಟಿ ತಾಲೂಕಿನ ಬಂಟನೂರ ಗ್ರಾಮದ ಸರ್ವೆ ನಂ. 178/1,2 ಈ ಜಮೀನದಲ್ಲಿ ಮುಖ್ಯ ಕಾಲುವೆ ಅಕ್ವಾಡೆಕ್ಕೆ ಹಾಗೂ ಏಂಬೆಕಮೆಂಟ್ ಕಾಮಗಾರಿ ಕೈಗೊಂಡಿದ್ದು, ಇದು ಕಳಪೆ ಮಟ್ಟದಿಂದ ಕೂಡಿದ್ದು, ಹಲವಾರು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದಿದ್ದು, ಕಾಮಗಾರಿಗೆ ಕಾಲುವೆಗೆ 19–01–2024 ರಂದು ಪ್ರಾಯೋಗಿಕವಾಗಿ ನೀರು ಹರಿಸಿದ್ದು ಕಾಲುವೆಯ ನೀರು ಸದರಿಯವರ ಜಮೀನಿಗೆ ನುಗ್ಗಿ ಅಪಾರ ಹಾನಿ ಸಂಬಂಧಿಸಿರುತ್ತದೆ. ಆದಕಾರಣ ಆದಷ್ಟು ಬೇಗ ತಾವು ಖುದ್ದಾಗಿ ಸ್ಥಳ ಪರಿಶೀಲನೆ ಮಾಡಿ ತಪ್ಪಿತಸ್ಥರಾದ ಗುತ್ತಿಗೆದಾರ ಆದಿತ್ಯ ಕನ್ಸಟ್ರಂಕ್ಸನ್ ಕಂಪನಿ ಹಾಗೂ ಅವರೊಂದಿಗೆ ಕೂಡಿಕೊಂಡು ಕಳಪೆ ಕಾಮಗಾರಿಗೆ ಸಹಕರಿಸಿದ ಕೆ.ಬಿ.ಜೆ. ಎನ್.ಎಲ್. ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಲು ಮಾರ್ಚ್ 21ರಂದು ಮನವಿ ಸಲ್ಲಿಸಲಾಗಿದೆ. ಆದರೆ ಇಲ್ಲಿಯವರೆಗೆ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ. ಕೆಲವು ದಿನಗಳ ಹಿಂದೆ ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಕಾಲುವೆಯಲ್ಲಿನ ನೀರು ಜಮೀನಿಗೆ ನುಗ್ಗಿ ಅಪಾರ ಪ್ರಮಾಣದ ಹಾನಿಯಾಗಿದ್ದು, ಕೂಡಲೇ ಸಂಬಂಧಪಟ್ಟ ಕಂದಾಯ ಇಲಾಖೆ ಹಾಗೂ ಕೆ.ಬಿ.ಜೆ.ಎನ್.ಎಲ್ . ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ಮಾಡಲು ಆದೇಶ ಮಾಡಿ ಹಾಗೂ ಕಳಪೆ ಮಟ್ಟದ ಕಾಮಗಾರಿ ಮಾಡಿದ ಗುತ್ತಿಗೆದಾರರ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳುವಂತೆ ಆಗ್ರಹಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮುಖಂಡರಾದ ಸಂಗಮೇಶ ದಾಸನಗೌಡ್ರು , ಪಿಂಟು ಗಬ್ಬೂರ, ಮುಕ್ಕದ್ದಸ್ ಇನಾಮದಾರ್, ತಾಲೂಕ ಮುಖಂಡ ಬಸವರಾಜ್ ಸಿಂಗನಹಳ್ಳಿ, ಜಿಲ್ಲಾ ಮುಖಂಡ ಸಂಗಮೇಶ್ ಹಿರೇಮಠ, ಉಮೇಶ್ ರುದ್ರಮನಿ, ಸಂತೋಷ್ ಶ್ಯಾಪೇಟಿ, ಮಹಿಳಾ ಮುಖಂಡರು ಸುಜಾತ ಪೂಜಾರಿ, ಮಲ್ಲಮ್ಮ ಲಮಾಣಿ, ಕವಿತಾ ಹಲ್ಲೋಳಿ, ಬೇಬಿ ತಳವಾರ, ಸುವರ್ಣ ಹಳ್ಳಿ, ನಾಗಮ್ಮ ವಾಲೀಕಾರ್. ರಾಜಶ್ರೀ ವಾಲಿಕಾರ್, ಅಶ್ವಿನಿ ಸಾವಂತ್, ಲಕ್ಷ್ಮಿ ದಾಸವಾಳ ಇನ್ನಿತರರು ಉಪಸ್ಥಿತರಿದ್ದರು.

# ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲೂ ಆಸಕ್ತಿ ವಹಿಸಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಓದಿನೊಂದಿಗೆ ಪಠ್ಯೇತರ ಚಟುವಟಿಕೆಯೂ ಮುಖ್ಯವಾಗಿದೆ. ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಅವರು ಹೇಳಿದರು.

ಅವರು, ಹಿಟ್ಟಿನಹಳ್ಳಿ ಗ್ರಾಮದ ಸರಕಾರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿನ ವಿದ್ಯಾರ್ಥಿಳೊಂದಿಗೆ ಸಂವಾದ ನಡೆಸಿದರು. ಅಂತರಾಷ್ಟ್ರೀಯ ಕ್ರೀಡಾ ದಿನ ಅಂಗವಾಗಿ ವಿಜಯಪುರ ತಾಲೂಕಿನ ಹಿಟ್ಟಿನಹಳ್ಳಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಗ್ರಂಥಾಲಯ, ಸರಕಾರಿ ಶಾಲೆ ಹಾಗೂ ವಿವಿಧ ಕಾಮಗಾ–ರಿಗಳನ್ನು ಪರಿಶೀಲಿಸಿದರು.

ವಿದ್ಯಾರ್ಥಿ ಜೀವನದಲ್ಲಿ ಕ್ರೀಡೆ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ. ಪಾಠದೊಂದಿಗೆ ಕ್ರೀಡೆಗಳಾದ ಚೆಸ್, ಕೇರಂ, ಬ್ಯಾಡ್ಮಿಂಟನ್, ವ್ಹಾಲಿಬಾಲ್, ಥ್ರೋಬಾಲ್, ಕಬಡ್ಡಿ, ಖೋ ಖೋ ಹಾಗೂ ಇತರೆ ಆಟಗಳನ್ನು ಪ್ರತಿನಿತ್ಯ ರೂಢಿಸಿಕೊಳ್ಳುವುದರಿಂದ ದೈಹಿಕ ಹಾಗೂ ಮಾನಸಿಕ ಸದೃಢತೆಯನ್ನು ಕಾಯ್ದುಕೊಳ್ಳಬಹುದು. ಮಕ್ಕಳು ವಿದ್ಯಾಭ್ಯಾಸದ ಜೊತೆಗೆ ಆಟೋಟಗಳಲ್ಲಿ ಪಾಲ್ಗೊಳ್ಳಬೇಕು. ಶಾಲಾ ಮಕ್ಕಳು ಮೊಬೈಲ್ ಬಳಕೆಯಿಂದ ದೂರವಿರಬೇಕು. ಓದಿನೊಂದಿಗೆ ಆಟಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು, ಇದರಿಂದ ನಾಯಕತ್ವ ಗುಣ, ಕ್ರೀಡಾ ಮನೋಭಾವ ಬೆಳೆಯುತ್ತದೆ ಎಂದು ಮಕ್ಕಳಿಗೆ ಸಲಹೆ ನೀಡಿದರು.

ಇದೇ ವೇಳೆ ವಿದ್ಯಾರ್ಥಿಗಳೊಂದಿಗೆ ಬ್ಯಾಡ್ಮಿಂಟನ್ ಆಟ ಆಡಿ ಮಕ್ಕಳನ್ನು ಹುರಿದುಂಬಿಸಿದರು. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಶಾಲಾ ಆಟದ ಮೈದಾನ ಅಭಿವೃದ್ಧಿ ಮಾಡಲಾಗಿರುವ ಕಾಮಗಾರಿಯನ್ನು ವೀಕ್ಷಿಸಿದರು.

ಹಿಟ್ಟಿನಹಳ್ಳಿ ಗ್ರಾಮದ ಸರಕಾರಿ ಗ್ರಂಥಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಕುರಿತು ಪರಿಶೀಲಿಸಿದರು. ಗ್ರಂಥಾಲಯದಲ್ಲಿ ವಿದ್ಯಾರ್ಥಿಗಳಿಗೆ ಓದಿಗೆ ಅನುಕೂಲ ಕಲ್ಪಿಸಿರುವ ಪುಸ್ತಕಗಳೊಂದಿಗೆ ಸ್ಪರ್ಧಾತ್ಮಕ, ಸ್ಪೋಕನ್ ಇಂಗ್ಲೀಷ್ ಪುಸ್ತಕಗಳು ಒದಗಿಸಲು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಸೂಚನೆ ನೀಡಿದರು. ಗ್ರಂಥಾಲಯದಲ್ಲಿ ಸ್ಮಾರ್ಟ್ ಟಿ.ವ್ಹಿ, ಇ–ಮೊಬೈಲ್ ವ್ಯವಸ್ಥೆ, ಓದಲು ಪ್ರತ್ಯೇಕ ಸ್ಥಳದ ವ್ಯವಸ್ಥೆಗಳನ್ನು ವೀಕ್ಷಿಸಿದರು. ಶಾಲಾ ಅವಧಿಯ ನಂತರ ಗ್ರಂಥಾಲಯಕ್ಕೆ ಭೇಟಿ ನೀಡಿ ಪಠ್ಯ ಚಟುವಟಿಕೆಗಳಲ್ಲಿ ತೊಡಗಬೇಕು. ಉತ್ತಮ ಸಾಧನೆ ಮಾಡಬೇಕು ಎಂದು ಮಕ್ಕಳನ್ನು ಹುರಿದುಂಬಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ. ಹೊಂಗಯ್ಯ, ಗ್ರಾಮ ಪಂಚಾಯತಿ ಅಧ್ಯಕ್ಷರಾದ ರವಿಕುಮಾರ ಕಡೆಮನಿ, ಉಪಾಧ್ಯಕ್ಷರಾದ ರತ್ನವ್ವ ಮುದೂರ, ಹಿಟ್ಟಿನಹಳ್ಳಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಾಜಶೇಖರ ಬಿರಾದಾರ, ಗ್ರಾ.ಪಂ ಕಾರ್ಯದರ್ಶಿ ದ್ಯಾಮಣ್ಣ ತಳವಾರ, ದ್ವಿತೀಯ ದರ್ಜೆ ಸಹಾಯಕ ಸೋಮನಾಥ ಬಳಬಟ್ಟಿ, ಗ್ರಾಮ ಪಂಚಾಯತಿಯ ಸರ್ವಸದಸ್ಯರು, ಗ್ರಾಮ ಪಂಚಾಯತಿಯ ಎಲ್ಲ ಸಿಬ್ಬಂದಿಯವರು ಹಾಗೂ ಇತರರು ಉಪಸ್ಥಿತರಿದ್ದರು.

# ರೇಣುಕಾ ಸ್ವಾಮಿ ಕೊಲೆ ಅತ್ಯಂತ ಹೇಯ ಕೃತ್ಯ :ಬಬಲೇಶ್ವರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಅತ್ಯಂತ ಹೇಯ ಕೃತ್ಯ, ಈ ಕೃತ್ಯದಲ್ಲಿ ಪಾಲ್ಗೊಂಡ ಎಲ್ಲರಿಗೂ ಕಠಿಣ ಶಿಕ್ಷೆ ಆಗಬೇಕು. ತಪ್ಪಿತಸ್ಥರೆಲ್ಲರನ್ನೂ ಬಂಧಿಸಿರುವ ಪೊಲೀಸ್ ಇಲಾಖೆಯ ಕಾರ್ಯವೈಖರಿ, ಈ ನೆಲದ ಕಾನೂನಿನ ಮೇಲೆ, ನಮ್ಮ ಹೆಮ್ಮೆಯ ಪೊಲೀಸ್ ಇಲಾಖೆಯ ಮೇಲೆ, ಶ್ರೀಸಾಮಾನ್ಯರ ವಿಶ್ವಾಸಾರ್ಹತೆಯನ್ನು ಇಮ್ಮಡಿಗೊಳಿಸಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿಯ ಮುಖ್ಯ ವಕ್ತಾರ ಸಂಗಮೇಶ ಬಬಲೇಶ್ವರ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಕೊಲೆಯಂತಹ ಕಾನೂನು ಬಾಹಿರವಾದ ಹೇಯ ಕೃತ್ಯದಲ್ಲಿ, ಪಾಲ್ಗೊಂಡವನು ಸೆಲೆಬ್ರಿಟಿ ಆಗಿರಲಿ, ಶ್ರೀಸಾಮಾನ್ಯನಾಗಿರಲಿ, ಎಲ್ಲರಿಗೂ ಕಾನೂನು ಒಂದೇ ಎಂಬ ಸ್ಪಷ್ಟ ಸಂದೇಶವನ್ನು ಪೊಲೀಸರು ಈ ಪ್ರಕರಣದಲ್ಲಿ ಪ್ರಚುರಪಡಿಸಿದ್ದಾರೆ. ನಟನಾಗಿ ಈ ನಾಡಿನಲ್ಲಿ ಮನೆ ಮಾತಾಗಿದ್ದ ದರ್ಶನ್, ಇಂಥ ಹೇಯ ಕೃತ್ಯದಲ್ಲಿ ಪಾಲ್ಗೊಂಡಿರುವುದು ನಾಚಿಕೆಗೇಡಿನ ಸಂಗತಿ, ಮೃತ ರೇಣುಕಾ ಸ್ವಾಮಿಯ ಧರ್ಮಪತ್ನಿ,ಆತನ ಮುಗ್ಧ ತಂದೆ, ತಾಯಿ, ಬಂಧುಗಳ ಆಕ್ರಂದನವನ್ನ ಮಾಧ್ಯಮದಲ್ಲಿ ನೋಡಿದವರೆಲ್ಲರ



ಕಣ್ಣುಗಳು ಹನಿಗೂಡುತ್ತವೆ. ರೇಣುಕಾ ಸ್ವಾಮಿ ಚಾಟ್ ಮಾಡುವುದರ ಮೂಲಕ ಅಶ್ಲೀಲ ಮೆಸೇಜ್ ಗಳನ್ನು ಕಳಿಸಿದ್ದರೆ, ಆತನ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬಹುದಿತ್ತು, ಅದನ್ನು ಬಿಟ್ಟು ಆತನನ್ನ ಹೊತ್ತು ತಂದು, ಚಿತ್ರಹಿಂಸೆ ನೀಡಿ ಕೊಲೆ ಮಾಡಿರುವುದು ಅತ್ಯಂತ ಅಮಾನವೀಯ ಕೃತ್ಯವಾಗಿದೆ. ಪರದೆಯ ಮೇಲೆ ಅನ್ಯಾಯದ ವಿರುದ್ಧ ಹೋರಾಡುವ, ಲಕ್ಷಾಂತರ ಜನ ಅಭಿಮಾನಿಗಳನ್ನ ಹೊಂದಿರುವ ದರ್ಶನ್, ಇಂಥಹ ಹೇಯ ಕೃತ್ಯದಲ್ಲಿ ಪಾಲ್ಗೊಳ್ಳುವುದರ ಮೂಲಕ ತಾನು ಪರದೆಯ ಮೇಲೆ ಮಾತ್ರ ಹೀರೋ, ನಿಜ ಜೀವನದಲ್ಲಿ ಜೀರೋ ಎನ್ನುವುದನ್ನು ತೋರಿಸಿಕೊಟ್ಟಿದ್ದಾನೆ. ಇದರಲ್ಲಿ ಪಾಲ್ಗೊಂಡ ಎಲ್ಲ–ರಿಗೂ ಕಠಿಣ ಶಿಕ್ಷೆ ಆಗಬೇಕು ಎಂದು ಸಂಗಮೇಶ ಬಬಲೇಶ್ವರ ಆಗ್ರಹಿಸಿದ್ದಾರೆ.

# ಸುಕ್ಷೇತ್ರ ಮುಮ್ಮೆಟ್ಟ ಗುಡ್ಡಕ್ಕೆ ಬಸ್ ಆರಂಭ

**ಉದಯರಶ್ಮಿ ನ್ಯೂಸ್**

ತಿಕೋಟಾ: ತಾಲ್ಲೂಕಿನ ಅರಕೇರಿ ಸಮೀಪದ ಮುಮ್ಮೆಟ್ಟ ಗುಡ್ಡದ ಅಮೋಘಸಿದ್ಧ ದೇವಸ್ಥಾನಕ್ಕೆ ಭಕ್ತರು ಹೋಗಲು ಅನುಕೂಲವಾಗಲೆಂದು ವಿಜಯಪುರ ಕೇಂದ್ರ ಬಸ್ ನಿಲ್ದಾಣದಿಂದ ಬಸ್ ಸೇವೆ ಆರಂಭಿಸುವಂತೆ ಸಚಿವ ಎಂ.ಬಿ.ಪಾಟೀಲ ನೀಡಿದ ನಿರ್ದೇಶನದಂತೆ ಆಪ್ತ ಕಾರ್ಯದರ್ಶಿ ಸಂತೋಷ ಲೋಕುರೆ ಅವರು ಡಿಟಿಓ ದೇವಾನಂದ ಬಿರಾದಾರ ಅವರಿಗೆ ವಿನಂತಿಸಿದ್ದರಿಂದ ಬುಧವಾರ ಬಸ್ ಸೇವೆ ಆರಂಭವಾಯಿತು.



ವಿಜಯಪುರ ಕೇಂದ್ರ ಬಸ್ ನಿಲ್ದಾಣದಿಂದ ಬೆಳಗ್ಗೆ ಎಂಟು ಗಂಟೆಗೆ, ಮದ್ಯಾಹ್ನ ಒಂದು ಗಂಟೆಗೆ, ಸಾಯಂಕಾಲ ಐದು ಗಂಟೆಗೆ ವಿಜಯಪುರದಿಂದ ಮುಮ್ಮೆಟ್ಟಿಗುಡ್ಡಕ್ಕೆ ಹೊರಡುವದು. ಕೇಂದ್ರ ಬಸ್ ನಿಲ್ದಾಣದಿಂದ ರಾಮಮಂದಿರ ಲಿಂಗದಗುಡಿರಸ್ತೆ, ಬಂಜಾರಾಕ್ರಾಸ್, ಬಾಯ್ ಪಾಸ್, ಮೋತಾಬಾಯಿಕ್ರಾಸ್, ಕರಾಡದೊಡ್ಡಿ ಕ್ರಾಸ್, ಅರಕೇರಿ, ಅರಕೇರಿ ಎಲ್.ಟಿ.2, ಅರಕೇರಿ ಎಲ್.ಟಿ.3 ಮಾರ್ಗವಾಗಿ ಮುಮ್ಮೆಟ್ಟಿಗುಡ್ಡ ತಲುಪುವದು.

ವಿಶೇಷ ಪೂಜೆ: ನೂತನವಾಗಿ ಆರಂಭವಾದ ಬಸ್ ಗೆ ತೆಂಗಿನ ಗರಿ ಹಾಗೂ ಹೂವುಗಳಿಂದ ಸಿಂಗರಿಸಿ ಬಲೂನಗಳನ್ನು ಕಟ್ಟಿ ಪೂಜೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮುಮ್ಮೆಟ್ಟಿಗುಡ್ಡದ ಪೂಜಾರಿ ನಾಡಗೌಡ ಒಡೆಯರ್, ಮುಖಂಡರಾದ ಅರವಿಂದ ರಾಠೋಡ, ರಾವಸಾಬ ಮಾನೆ, ಸೋಮು ಬರಕಡೆ, ಪ್ರಕಾಶ ರಾಠೋಡ, ಸಿದ್ದು ದಳವಾಯಿ, ಬಾಜಿರಾಯ ಖರೆ, ಗೋವಿಂದ ರಾಠೋಡ, ಮಾಸಿದ್ದ ಜಿಡ್ಡಿಮನಿ, ಸಂಜು ಖರೆ ಇತರರಿದ್ದರು.

## ವಿಜಯಪುರ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಪ್ರಗತಿ ಪರಿಶೀಲನಾ ಸಭೆ

# ನಿಗದಿತ ಅವಧಿಯಲ್ಲಿ ಪ್ರಗತಿ ಸಾಧಿಸಲು ಜಿಲ್ಲಾಧಿಕಾರಿ ಸೂಚನೆ

**ಉದಯರಶ್ಮಿ ನ್ಯೂಸ್**



ವಿಜಯಪುರ: 2024–25ನೇ ಸಾಲಿಗೆ ಸಿಎಂಕೆಕೆವೈ ಯೋಜನೆಯಡಿ ಕೌಶಲ್ಯ ತರಬೇತಿ ಕೈಗೊಳ್ಳಲು ಪ್ರಸ್ತುತ ಜಿಲ್ಲೆಯಲ್ಲಿ ಮಾನ್ಯತೆ ಹೊಂದಿದ ಖಾಸಗಿ ತರಬೇತಿ ಸಂಸ್ಥೆಗಳು ಹೊಂದಿರುವ ಜಾಬ್‌ರೋಲ್‌ಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಿ ಅಂತಿಮವಾಗಿ ಆಯ್ಕೆ ಮಾಡಿದ ಜಾಬ್‌ರೋಲ್‌ಗಳನ್ನು ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿಯ ಪ್ರಗತಿಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡೇ–ನಲ್ಮ್ ಯೋಜನೆಯ ಎಲ್ಲ ಉಪಘಟಕಗಳ ಪ್ರಗತಿ ಪರಿಶೀಲನೆ, ಪಿ.ಎಂ. ಸ್ವ–ನಿಧಿ ಅಡಿ ಬಾಕಿ ಇರುವ ಫಲಾನುಭವಿಗಳ ಅರ್ಜಿಗಳನ್ನು ಪಡೆದು ಸಾಲ ಮಂಜೂರಾತಿ ಹಾಗೂ ವಿತರಣೆಗೆ ಆದ–ತ್ಯತಾನುಸಾರ ಕ್ರಮವಹಿಸುವಂತೆಯೂ, ಸ್ವ–ನಿಧಿ ಸೇ ಸಮೃದ್ಧಿ ಯೋಜನೆಯಡಿ 8 ಸಾಮಾಜಿಕ ಭದ್ರತಾ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಒದಗಿಸಲು ಕ್ರಮ ವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

2024–25ನೇ ಸಾಲಿನ ಡೇ–ನಲ್ಮ್ ಅಭಿಯಾನದಡಿ 410 ಮಹಿಳಾ ಸ್ವ–ಸಹಾಯ ಸಂಘಗಳ ರಚನೆ, 20 ಒಕ್ಕೂಟ ರಚನೆ, 161 ವೈಯಕ್ತಿಕ ಸ್ವಯಂ ಉದ್ಯೋಗ, 11 ಗುಂಪು ಉದ್ಯೋಗ, 204 ಸ್ವ–ಸಹಾಯ ಸಂಘಗಳಿಗೆ ಬ್ಯಾಂಕ್ ಲಿಂಕೇಜ್ ಗುರಿ ನಿದಿಪಡಿಸಿದ್ದು, ನಿಗದಿತ ಸಮಯದಲ್ಲಿ ಪ್ರಗತಿ ಸಾಧಿಸುವಂತೆ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು, ಮುಖ್ಯಾಧಿಕಾ–ರಿಗಳಿಗೆ ಸೂಚಿಸಿದರು.

ಡೇ–ನಲ್ಮ್ ಅಭಿಯಾನದಡಿ ಅರ್ಬನ್ ಲರ್ನಿಂಗ್ ಇಂಟರ್ನ್ಶಿಫ್ ಪ್ರೊಗ್ರಾಮ ಯೋಜನೆಯಡಿ ಜಿಲ್ಲೆಗೆ 58 ಗುರಿ ನಿಗದಿಪಡಿಸಿದ್ದು, ನಿಗದಿತ ಸಮಯದಲ್ಲಿ ಪ್ರಗತಿ ಸಾಧಿಸುವಂತೆ ಅವರು ಸೂಚಿಸಿದರು. ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಬಿ. ಕುಂಬಾರ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಬದ್ರೂದ್ದಿನ ಸೌದಾಗರ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ವಿಜಯ ಮೆಕ್ಕಳಕಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ.ಕೆ.ಚವ್ಹಾಣ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಭಜಂತ್ರಿ, ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ ಸೇ–ರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ನಗರ ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ರಾಣಿ ಚನ್ನಮ್ಮ & ಸ್ವಾಮಿ ವಿವೇಕಾನಂದ ಮೂರ್ತಿಗಳ ಭವ್ಯ ಮೆರವಣಿಗೆ

**ಉದಯರಶ್ಮಿ ನ್ಯೂಸ್**

ಸಿಂದಗಿ: ರಾಣಿ ಚನ್ನಮ್ಮ ಹಾಗೂ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ ಮೂರ್ತಿಗಳು ಭವ್ಯ ಹಾಗೂ ನಯನ ಮನೋಹರವಾಗಿವೆ. ವಿಜಯಪುರ ಜಿಲ್ಲೆಯಲ್ಲಿಯೇ ಇಂತಹ ಭವ್ಯ ಮೂರ್ತಿಗಳು ಪ್ರತಿಷ್ಠಾಪನೆಗೊಂಡಿದ್ದು, ಸಿಂದಗಿಯಲ್ಲಿಯೇ ಪ್ರಥಮ ಎಂದು ಕೂಡಲಸಂಗಮ ಜಗದ್ಗುರು ಪೀಠದ ಜಗದ್ಗುರು ಜಯಬಸವ ಮೃತ್ಯುಂ–ಜಯ ಸ್ವಾಮಿಗಳು ಹೇಳಿದರು.

ನಗರದಲ್ಲಿ ಕನಕದಾಸ ವೃತ್ತದ ಬಳಿ ಎರಡೂ ಪುತ್ಥಳಿಗಳ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಶಾಸಕ ಅಶೋಕ ಮನಗೂಳಿ ಅವರ ಮುತುವರ್ಜಿ ಹಾಗೂ ನೇತೃತ್ವದಲ್ಲಿ ಎರಡೂ ಮೂರ್ತಿಗಳು ಸ್ಥಾಪನೆಗೊಂಡದ್ದು ಶ್ಲಾಘನೀಯ ಎಂದು ಹರ್ಷವ್ಯಕ್ತಪಡಿಸಿದರು.

ಈ ವೇಳೆ ಶಾಸಕ ಅಶೋಕ ಮನಗೂಳಿ ಮಾತನಾಡಿ, ತಾಲೂಕಿನ ಜನತೆಯ ಬಹು ದಿನಗಳ ಬೇಡಿಕೆಯಾಗಿದ್ದ ಎರಡೂ ಮೂರ್ತಿಗಳ ಪ್ರತಿಷ್ಠಾಪನೆ ನನ್ನ ಅವಧಿಯಲ್ಲಿಯೇ ಸಾಕಾರಗೊಂಡದ್ದು ನನಗೆ ಹರ್ಷ ತಂದಿದೆ. ಈ ಮೂರ್ತಿಗಳ ಅನಾವರಣ ಕಾರ್ಯಕ್ರಮವು ಟಿಪ್ಪು ಸುಲ್ತಾನ ವೃತ್ತದ ಕಾಮಗಾರಿ ಪೂರ್ಣಗೊಂಡ ನಂತರ ಮೂರೂ ಮೂರ್ತಿಗಳ ಉದ್ಘಾಟನಾ ಕಾರ್ಯಕ್ರಮವನ್ನು ರಾಜ್ಯದ ಹರಗುರು ಚರಮೂರ್ತಿಗಳ ಸಾನಿಧ್ಯ, ರಾಜಕೀಯ ದುರೀಣರ ಸಮ್ಮುಖ ಹಾಗೂ ಮುಖ್ಯಮಂತ್ರಿಗಳ ಹಸ್ತದಿಂದ ನೆರವೇರಿಸಲಾಗುವುದು ಎಂದು ಹೇಳಿದರು.

ಕನಕದಾಸ ವೃತ್ತದಲ್ಲಿ ಚಾಲನೆಗೊಂಡ ಈ ಎರಡೂ ಮೂರ್ತಿಗಳ ಭವ್ಯ ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳಾದ ಚಿಟ್ಟ ಹಲಗಿ, ಡೊಳ್ಳು ಕುಣಿತ, ಗೊಂಬೆ ಕುಣಿತ, ಕುದುರೆ ಕುಣಿತ, ಲೇಜಿಮ್ ಸೇರಿದಂತೆ ಇತರ ವಾದ್ಯಗಳೊಂದಿಗೆ ಮೆರವರಣಿಗೆ ನಡೆಯಿತು.





ಚನ್ನಮ್ಮ ವೃತ್ತಕ್ಕೆ ಸ್ಥಳಾವಕಾಶ ನೀಡಿದ ಆಲಮೇಲದ ಶೌಕತ್‌ಅಲಿ ಸುಂಬಡ ಅವರಿಗೆ ಹಾಗೂ ಎರಡೂ ಮೂರ್ತಿಗಳ ತಯಾರಕ ಬೆಂಗಳೂರು ಬಿಡದಿಯ ಶಿಲ್ಪಕಾರ ವಿಜಯ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು, ಆಸಂಗಿಹಾಳ ಶ್ರೀಮಠದ ಶಂಕರಲಿಂಗ ಮಹಾರಾಜರು, ಊರಿನ ಹಿರಿಯಮಠದ ಶಿವಾನಂದ ಶಿವಾಚಾರ್ಯರು, ಆದಿಶೇಷ ಶ್ರೀಮಠದ ನಾಗರತ್ನ ವೀರಾಜೇಂದ್ರ ಮಹಾಸ್ವಾಮಿಗಳು, ವಿರಕ್ತಮಠದ ಬಸವಪ್ರಭು ಶ್ರೀಗಳು, ಹಿಕ್ಕಣಗುತ್ತಿ ಲಿಂಗಾಯತ ಮಠದ ಪ್ರಭುಲಿಂಗ ಶರಣರು, ಸಮಾಜದ ಅಧ್ಯಕ್ಷ ಎಂ.ಎಂ.ಹಂಗರಗಿ, ಸೋಮನಗೌಡ ಬಿರಾದಾರ, ಪುರಸಭೆ ಮಾಜಿ ಅಧ್ಯಕ್ಷ ಡಾ.ಶಾಂತವೀರ ಮನಗೂಳಿ, ಡಾ.ಅರವಿಂದ ಮನಗೂಳಿ, ಅಶೋಕ ಅಲ್ಲಾಪೂರ, ಸಿದ್ದನಗೌಡ ಪಾಟೀಲ ಹೂವಿನಹಳ್ಳಿ, ಕಾನಿಪ ಅಧ್ಯಕ್ಷ ಆನಂದ ಶಾಬಾದಿ, ಮುತ್ತು ಶಾಬಾದಿ, ಸಂಗನಗೌಡ ಪಾಟೀಲ, ಮಲ್ಲನಗೌಡ ಪಾಟೀಲ ಇಬ್ರಾಹಿಂಪೂರ, ಚಂದ್ರಶೇಖರ ನಾಗರಬೆಟ್ಟ, ಅರವಿಂದ ಹಂಗರಗಿ, ಗೊಲ್ಲಾಳಪ್ಪಗೌಟ ಪಾಟೀಲ ಗೋಲಗೇರಿ, ಚನ್ನು ಹೊಡ್ಲ, ನೌಕರರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ, ಅಶೋಕ ಕೋಲಾರಿ, ಗುರುಗೌಡ ಬಿರಾದಾರ, ಆರ್.ಡಿ.ದೇಸಾಯಿ, ಸಿದ್ದು ಜಗತಿ, ರಮೇಶ ಯಾಳಗಿ, ಶಿವಾನಂದ ನಿಗಡಿ, ರಾಕೇಶ ಮಠ, ಮಲ್ಲಿಕಾರ್ಜುನ ಅಲ್ಲಾಪೂರ ಸೇ–ರಿದಂತೆ ತಾಲೂಕಿನ ಸುತ್ತಮುತ್ತಲಿನ ಸಾವಿರಾರು ಚನ್ನಮ್ಮ ಮತ್ತು ವಿವೇಕಾನಂದರ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಆಡಳಿತ ನ್ಯಾಯಾಧೀಕರಣ ತರಬೇತಿಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಮಾಜ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿಗಾಗಿ ಪರಿಶಿಷ್ಟ ಜಾತಿಯ ಹಾಗೂ ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣ ತರಬೇತಿ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿಯ ಹಾಗೂ ಪರಿಶಿಷ್ಟ ಪಂಗಡದ ಕಾನೂನು ಪದವೀಧರರು ಆನ್‌ಲೈನ್ ಮೂಲಕ ಅರ್ಜಿಯನ್ನು ಪರಿಶಿಷ್ಟ ಜಾತಿ ಅಭ್ಯರ್ಥಿಗಳು ತಿ.ಇಚಿಡಿ.ಟಿಚಿ.ಙಟ ರಲ್ಲಿ & ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು t.kar.nic.in ರಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಜೂನ್ 18 ರಿಂದ ಅರ್ಜಿಸಲ್ಲಿಸಬಹುದಾಗಿದ್ದು, ಜುಲೈ 31 ಕೊನೆಯ ದಿನವಾಗಿದೆ.

ಆನ್‌ಲೈನ್ ಅರ್ಜಿ ನಮೂನೆ ಹಾಗೂ ಅಗತ್ಯ ದಾಖಲೆಗಳಿಗೆ ಪತ್ರಾಂಕಿತ ಅಧಿಕಾರಿಗಳಿಂದ ದೃಢಿಕರಣದೊಂದಿಗೆ ಅರ್ಜಿಯನ್ನು ಉಪನಿರ್ದೇಶಕರು, ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕಚೇರಿಗಳಿಗೆ ಸಲ್ಲಿಸತಕ್ಕದ್ದು ಮತ್ತು ಇತರೆ ಹೆಚ್ಚಿನ ವಿವರಗಳಿಗಾಗಿ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ವಿಜಯಪುರ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಸಮಾಜಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪುಂಡಲೀಕ ಮಾನವರ ತಿಳಿಸಿದ್ದಾರೆ.

# ದೀನದಯಾಳ್ ಅಂತ್ಯೋದಯ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದಡಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಮಹಾನಗರಪಾಲಿಕೆ ವತಿಯಿಂದ 2024–25ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಾದ ದೀನದಯಾಳ್ ಅಂತ್ಯೋದಯ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದಡಿ ಉಪ ಘಟಕವಾರು ಭೌತಿಕ ಮತ್ತು ಆರ್ಥಿಕ ಗು–ರಿಯನ್ನು ನಿಗದಿಪಡಿಸಿದ್ದು, ಸ್ವಯಂ ಉದ್ಯೋಗ(ದ್ವಿ–ಪ್ರತಿ ಅರ್ಜಿ)–78, ಗುಂಪು ಸಮೂಹ ಉದ್ಯಮಗಳು ಯೋಜನೆ  06, ಸ್ವಸಹಾಯ ಗುಂಪುಗಳ ರಚನೆ–201, ಸ್ವಸಹಾಯ ಗುಂಪುಗಳ ಬ್ಯಾಂಕ ಲಿಂಕೇಜ್–101 ಸದರಿ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಬಿಪಿಎಲ್/ಅಂತ್ಯೋದಯ ರೇಷನ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಮತದಾರರ ಗುರುತೀನ ಚೀಟಿ, ವಿದ್ಯಾರ್ಹತೆ ಪ್ರಮಾಣ ಪತ್ರ ಮತ್ತು ಇತ್ತೀಚಿನ ಎರಡು ಭಾವಚಿತ್ರಗಳೊಂದಿಗೆ ದ್ವಿಪ್ರತಿಯಲ್ಲಿ ಕನಿಷ್ಠ 18 ರಿಂದ 50 ವಯಸ್ಸಿನ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಜೂನ್ 26 ರಂದು ಸಾಯಂಕಾಲ 5 ಗಂಟೆಯ ಒಳಗಾಗಿ ಮಹಾನಗರ ಪಾಲಿಕೆಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಯಾಗಿ ಮಹಾನಗರಪಾಲಿಕೆಯ ಡೇ–ನಲ್ಮ್ ವಿಭಾಗವನ್ನು ಸಂಪರ್ಕಿಸಬಹುದು ಎಂದು ಮಹಾನಗರಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಲ್ಲಿ ಆತ್ಮವಿಶ್ವಾಸ, ಸಮಾನತೆ ಮೂಡಿಸಲು ಶ್ರಮಿಸೋಣ :ತಾಪಂ ಇಓ ಅಗ್ನಿ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಮಕ್ಕಳಲ್ಲಿ ಸ್ವಯಂ ಮೌಲ್ಯ, ಆತ್ಮವಿಶ್ವಾಸ, ಸೃಜನಶೀಲತೆ, ಸಮಾನತೆ, ಶಾಂತಿ ಮನೋಭಾವದಂತಹ ಭಾವನೆಗಳನ್ನು ಮೂಡಿಸಲು ಶ್ರಮಿಸೋಣ ಎಂದು ತಾಲ್ಲೂಕು ಪಂಚಾಯಿತಿ ಇಓ ರಾಮು ಅಗ್ನಿ ಹೇಳಿದರು.

ತಾಲ್ಲೂಕಿನ ಕೋರವಾರ ಸರ್ಕಾರಿ ಕನ್ನಡ ಶಾಲೆ ಹಾಗೂ ಮುಳಸಾವಳಗಿ ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ಮಂಗಳವಾರ ಅಂತರಾಷ್ಟ್ರೀಯ ಆಟದದಿನದ ಅಂಗವಾಗಿ ಆಟದ ಹಕ್ಕನ್ನು ಸಂಭ್ರಮಿಸುವ ಚಟುವಟಿ–ಕೆಗಳಿಗೆ ತಾಲ್ಲೂಕು ಪಂಚಾಯಿತಿ ಇಓ ರಾಮು ಅಗ್ನಿ ಚಾಲನೆ ನೀಡಿ ಮಾತನಾಡಿದರು.

ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಅಂತರರಾಷ್ಟ್ರೀಯ ಆಟದ ದಿನದ ಅಂಗವಾಗಿ ಆಟದ ಹಕ್ಕನ್ನು ಸಂಭ್ರಮಿಸಲು ವಿಶ್ವಸಂಸ್ಥೆಯು ಅಂಗೀಕರಿಸಿ ಘೋಷಿಸಿದ ರಾಷ್ಟ್ರೀಯ ಆಟದ ದಿನವಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ಇಲಾಖೆ ಮಕ್ಕಳಿಗೆ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಿ ಲಿಂಗ, ಜಾತಿ, ವರ್ಗ ಮೂಲಗಳನ್ನು ತೊಡೆದು ಹಾಕಲು ಅರಿವು ಮೂಡಿಸುವುದಾಗಿದೆ ಎಂದರು. ನಂತರ ಕೋರವಾರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಸರ್ಕಾರಿ ಕನ್ನಡ ಶಾಲೆಯಲ್ಲಿ ಜರುಗಿದ ಒಳಾಂಗಣ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಕ್ಕಳೊಂದಿಗೆ ಚೆಸ್ ಮತ್ತು ಕೇರಂ ಆಟಗಳನ್ನು ಆಡಿ ಸಂಭ್ರಮಿಸಿದರು.

ಯೋಜನಾಧಿಕಾರಿ ಶ್ರೀನಿವಾಸ ಪವಾರ, ತಾಂತ್ರಿಕ ಸಂಯೋಜಕ ಶರಣಗೌಡ ಪಾಟೀಲ, ಐಇಸಿ ಸಂಯೋಜಕ ಸಿದ್ದು ಕಾಂಬಳೆ, ಪಿಡಿಓ ಕಾಶೀನಾಥ ಕಡಕಭಾವಿ, ಕಾರ್ಯದರ್ಶಿಗಳಾದ ಸಿ.ಎಸ್. ಬಿರಾದಾರ, ಜಿ.ವಿ.ಪಟ್ಟಣಶೆಟ್ಟಿ, ರವಿ ಗೋಟೂರ, ಶಂಕರ ಉಕುಮನಾಳ, ಆರ್.ಎಸ್.ಉಪ್ಪಾರ, ಬಿ.ಐ.ಟಕ್ಕಳಕಿ ಹಾಗೂ ಶಾಲಾ ಶಿಕ್ಷಕ ಸಿಬ್ಬಂದಿ ವರ್ಗ, ಮಕ್ಕಳು ಇದ್ದರು.

# ಝಳಕಿ: ಜೂನ್ 14 ರಿಂದ 16 ವರೆಗೆ ವಿದ್ಯುತ್ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ವಿಜಯಪುರ: 110 ಕೆವಿ ಝಳಕಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 10 ಎಂ.ವಿ ಬದಲು 20 ಎಂ.ವಿ ಶಕ್ತಿ ಪರಿವರ್ತಕ ಅಳವಡಿಸುವ ಕಾಮಗಾರಿ ಕೈಗೊಂಡಿರುವುದರಿಂದ ಜೂನ್ 14 ರಿಂದ 16 ವರೆಗೆ ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ 11 ಕೆವಿ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಆದ ಕಾರಣ ಸದರಿ ಮಾರ್ಗಗಳಲ್ಲಿ ಬರುವ ಗ್ರಾಹಕರು ಸಾರ್ವಜನಿಕರು ಸಹಕರಿಸಬೇಕು ಎಂದು ಇಂಡಿ ಹೆಸ್ಕಾಂ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.14ರಂದು ವಿದ್ಯುತ್ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ವಿಜಯಪುರ: 110 ಕೆವಿ ದೇವರ ಹಿಪ್ಪರಗಿ, 110 ಕೆವಿ ಅಥರ್ಗಾ, 110 ಕೆವಿ ಹಿರೇಮಸಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೊಂಡಿರುವುದರಿಂದ ಜೂನ್ 14 ರಂದು ಬೆಳಗ್ಗೆ 8 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ 11 ಕೆವಿ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಆದ ಕಾರಣ ಸದರಿ ಮಾರ್ಗಗಳಲ್ಲಿ ಬರುವ ಗ್ರಾಹಕರು ಸಾರ್ವಜನಿಕರು ಸಹಕರಿಸಬೇಕು ಎಂದು ಇಂಡಿ ಹೆಸ್ಕಾಂ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಲ್ಲೆ ಪ್ರಕರಣ: 8 ಜನರ ವಿರುದ್ಧ ಎಫ್‌ಐಆರ್ ದಾಖಲು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ನ್ಯಾಯಾಲಯದ ಎದುರು ಮಂಗಳವಾರ ಯುವಕನೋರ್ವನಿಗೆ ಕಬ್ಬಿಣದ ರಾಡ್ ನಿಂದ ಮನಸೋ ಇಚ್ಛೆ ಥಳಿಸಿ ಮಾರಣಾಂತಿಕ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಗೇವಾಡಿ ತಾಲೂಕು ಜಯವಾಡಗಿ ಗ್ರಾಮದ 8 ಜನರ ವಿರುದ್ಧ ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಭೀಮಪ್ಪ ಕರಳ್ಳಿ, ನಿಂಗಪ್ಪ ಕರಳ್ಳಿ, ಬಸಪ್ಪ ಕರಳ್ಳಿ, ಶಂಕ್ರಪ್ಪ ಕರಳ್ಳಿ, ಯಲ್ಲಪ್ಪ ಕರಳ್ಳಿ , ಮಲ್ಲಪ್ಪ ಕರಳ್ಳಿ, ಸೋಮಪ್ಪ ಕರಳ್ಳಿ, ಶಿವಪ್ಪ ಕರಳ್ಳಿ ಇವರ ಮೇಲೆ ಭಾರತೀಯ ದಂಡ ಸಂಹಿತೆಯ ಕಲಂ 143, 147, 148, 341, 323, 326, 109, 504, 506 ಮತ್ತು ಓದಬಲ್ಲ 149 ಕಲಂಗಳ ಅಡಿ ಪ್ರಕರಣ ದಾಖಲಾಗಿದೆ.

ಗಾಯಾಳು ಸಂತೋಷ ಕಾಡಮಗೇರಿ ಹೆಚ್ಚಿನ ಚಿಕಿತ್ಸೆಗಾಗಿ ವಿಜಯಪುರದ ಆಸ್ಪತ್ರೆಗೆ ದಾಖಲಾಗಿದ್ದಾನೆ. ಘಟನೆ ಕುರಿತು "ಉದಯರಶ್ಮಿ" ಯೊಂದಿಗೆ ಮಾತನಾಡಿ ನನ್ನ ತಾಯಿಯ ತವರೂರು ಜಯವಾಡಗಿ. ನಾನು ಅಲ್ಲಿಯೇ ವಾಸವಿದ್ದೆ. ಕಳೆದ 15 ದಿನಗಳ ಹಿಂದೆ ಯುವತಿಗೆ ಈರುಳ್ಳಿಯ ಬೆಲೆ ಕೇಳಿದ್ದಕ್ಕಾಗಿ ನನಗೆ ಹೊಡೆಯಲು ಮುಂದಾಗಿದ್ದರು. ಭಯದಿಂದ ನಾನು ಊರು ತೊರೆದು ಯರಝರಿ ಗ್ರಾಮದಲ್ಲಿ ವಾಸವಾದೆ. ಬೇರೊಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಗಳವಾರ ವಕೀಲರ ಭೇಟಿಗಾಗಿ ಪಟ್ಟಣದ ನ್ಯಾಯಾಲಕ್ಕೆ ಆಗಮಿಸಿದ್ದಾಗ ನನ್ನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ ಎಂದು ವಿವರಿಸಿ ನನಗೆ ಜೀವಭಯ ಇದೆ ರಕ್ಷಣೆ ಕೊಡಿಸಿ ಎಂದಿದ್ದಾನೆ.

### ವಿಶ್ವಕಾರ್ಮಿಕ & ಬಾಲಕಾರ್ಮಿಕ ವಿರೋಧಿ ದಿನಾಚರಣೆಯಲ್ಲಿ ನ್ಯಾಯಾಧೀಶೆ ಸೌಮ್ಯ ಹೂಲಿ ಮಾತು

# 14ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಕಳಿಸುವುದು ಅಪರಾಧ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಹದಿನಾಲ್ಕು ವರ್ಷದೊಳಗಿನ ಮಕ್ಕಳನ್ನು ಯಾವುದೇ ಕಾರಣಕ್ಕೂ ಯಾವುದೇ ಕೆಲಸಕ್ಕೆ ದುಡಿಯುವದಕ್ಕೆ ಕಳಿಸುವದು ಕಾನೂನುರೀತ್ಯ ಅಪರಾಧ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ವಿದ್ಯಾವಂತರನ್ನಾಗಿ ಮಾಡಬೇಕೆಂದು ಹೆಚ್ಚುವರಿ ಸಿವ್ಹಿಲ್ ನ್ಯಾಯಾಧೀಶೆ ಸೌಮ್ಯ ಹೂಲಿ ಹೇಳಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ಕಾರ್ಮಿಕ ಇಲಾಖೆ ಸಹಯೋಗದಲ್ಲಿ ವಿಶ್ವಕಾರ್ಮಿಕ ದಿನಾಚರಣೆ, ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆಯಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿದ ಮಾತನಾಡಿದ ಅವರು, ಜನಸಾಮಾನ್ಯರಲ್ಲಿ ಕಾನೂನು ಅರಿವು ಬಹಳ ಮುಖ್ಯ. ಎಲ್ಲರೂ ಕಾನೂನುಗಳ ಬಗ್ಗೆ ಅರಿವು ಮೂಡಿಸಿಕೊಂಡು ಜಾಗೃತರಾಗಿ ಬಾಲಕಾರ್ಮಿಕರರಾಗುವುದನ್ನು ತಡೆಗಟ್ಟುವಲ್ಲಿ ಪಾತ್ರ ವಹಿಸಬೇಕು. ಯಾವ ಮಕ್ಕಳು ಬಾಲಕಾರ್ಮಿಕರಾಗದಂತೆ ನೋಡಿಕೊಳ್ಳುವದು ಪ್ರತಿಯೊಬ್ಬರ ಜವಾಬ್ದಾರಿ. ಮಕ್ಕಳು ಯಾವುದೇ ಕಾರಣಕ್ಕೂ ಶಾಲೆ ಬಿಡದೇ ನಿರಂತರವಾಗಿ ಶಾಲೆಗೆ ಬಂದು ಉತ್ತಮ ಅಧ್ಯಯನ ಮಾಡುವ ಮೂಲಕ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಬೇಕೆಂದರು.

ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ ಮಾತನಾಡಿ, ಸರ್ಕಾರ ಶಿಕ್ಷಣಕ್ಕೆ ಸಾಕಷ್ಟು ಆದ್ಯತೆ ನೀಡಿದೆ. ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಸಮವಸ, ಶೂ, ಸಾಕ್ಸ್, ಬಿಸಿಯೂಟ, ಹಾಲು ಸೇರಿದಂತೆ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ. ಪಾಲಕರು ಇದನ್ನು ಅರಿತುಕೊಂಡು ಯಾವುದೇ ಕಾರಣಕ್ಕೂ ತಮ್ಮ ಮಕ್ಕಳನ್ನು ಶಾಲೆಯಿಂದ ದೂರ ಇಡಬಾರದು. ತಮ್ಮ ಮಕ್ಕಳನ್ನು ತಪ್ಪದೇ ಶಾಲೆಗೆ ಕಳುಹಿಸುವ ಮೂಲಕ ಅವರನ್ನು ಶಿಕ್ಷಣವಂತರನ್ನಾಗಿ ಮಾಡಬೇಕು. ಯಾರೂ ಮಕ್ಕಳನ್ನು ದುಡಿಯಲು ಕಳುಹಿಸಬಾರದು ಎಂದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಚ್.ಎಸ್.ಗುರಡ್ಡಿ ಮಾತನಾಡಿ, ಕಾನೂನುಗಳ ಬಗ್ಗೆ ಎಲ್ಲರೂ ಅರಿತುಕೊಂಡು ಜಾಗೃತರಾಗುವದು ಅಗತ್ಯವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಿಡಿಪಿಓ ನಿರ್ಮಲಾ ಸುರಪುರ ಮಾತನಾಡಿ, ಬಾಲ್ಯ ವಿವಾಹ ನಿಷೇಧ ಕಾಯ್ದೆ ತುಂಬಾ ಕಠಿಣವಾಗಿದೆ. ಎಲ್ಲಿಯಾದರೂ ಬಾಲ್ಯವಿವಾಹ ನಡೆಯುತ್ತಿದ್ದರೆ ಅದರ ಬಗ್ಗೆ ನಮ್ಮ ಇಲಾಖೆಯ ಗಮನಕ್ಕೆ ತಂದರೆ ಅವರ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು. ಯಾವುದೇ ಕಾರಣಕ್ಕೂ ಮಕ್ಕಳನ್ನು ದುಡಿಯಲು ಕಳುಹಿಸುವದು ಸಹ ತಪ್ಪು. ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಗಟ್ಟಬೇಕಾದರೆ ಶಿಕ್ಷಣ ತುಂಬಾ ಅಗತ್ಯವಿದೆ. ಪ್ರತಿಯೊಬ್ಬರೂ ಕಾನೂನು ತಿಳಿದುಕೊಂಡರೆ ಅಪರಾಧಗಳನ್ನು ತಡೆಗಟ್ಟಬಹುದು ಎಂದರು.

ವಕೀಲ ಆರ್.ಎಸ್.ಪವಾರ ಅವರು ವಿಶ್ವಕಾರ್ಮಿಕ ದಿನಾಚರಣೆ ಹಾಗೂ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಕುರಿತು ಉಪನ್ಯಾಸ ನೀಡಿದರು.

ಕಾರ್ಮಿಕ ಇಲಾಖೆಯ ನಿರೀಕ್ಷಕ ಐ.ಹೆಚ್.ಇನಾಂದಾರ, ಸಹಾಯಕ ಸರ್ಕಾರಿ ಅಭಿಯೋಜಕ ರಾಹುಲ ಶಾಹ, ಪ್ರಭಾರಿ ಮುಖ್ಯಗುರು ವೇಣುಗೋಪಾಲ ಅಪಸಂಗಿ, ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆಯ ವಿಭಾಗದ ಉಪಪ್ರಾಂಶುಪಾಲ ರಮೇಶ ಪೂಜಾರಿ, ಪ್ರೌಢಶಾಲೆಯ ಸಹಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎಂ.ಎಸ್.ಝಳಕಿ ಇತರರು ಇದ್ದರು. ಬಿ.ಎಂ.ಗಂಜಿಹಾಳ ಸ್ವಾಗತಿಸಿದರು. ಶಿವಕುಮಾರ ಹುಲಸೂರ ನಿರೂಪಿಸಿದರು. ವಿದ್ಯಾ ಮನಗೂಳಿ ವಂದಿಸಿದರು. ಕಾರ್ಯಕ್ರಮದಲ್ಲಿ ಬಾಲಕಾರ್ಮಿಕರ ವಿರೋಧಿ ದಿನಾಚರಣೆಯ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು.

ಕಾರ್ಯಕ್ರಮ ಮುನ್ನ ವಿಶ್ವ ಕಾರ್ಮಿಕರ ದಿನಾಚರಣೆ ಹಾಗೂ ವಿಶ್ವ ಬಾಲಕಾರ್ಮಿಕರ ವಿರೋಧಿ ದಿನಾಚರಣೆಯ ಕುರಿತು ಜಾಗೃತಿ ಮೂಡಿಸಲು ಪ್ರಮುಖ ಬೀದಿಗಳಲ್ಲಿ ಜಾಥಾ ಜರುಗಿತು.

# ಜೂ.14ರಂದು 6ನೇ ತರಗತಿ ಪ್ರವೇಶಾತಿಗಾಗಿ ಕೌನ್ಸಲಿಂಗ್

**ಉದಯರಶ್ಮಿ ನ್ಯೂಸ್**

ವಿಜಯಪುರ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ/ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸರ್ಕಾರಿ ಮುಸ್ಲಿಂ ವಸತಿ(ಆಂಗ್ಲ ಮಾಧ್ಯಮ) ಶಾಲೆಗಳ 2024–25ನೇ ಸಾಲಿನ 6ನೇ ತರಗತಿ ಪ್ರವೇಶಾತಿಗೆ ನಡೆಸಿದ ಪರೀಕ್ಷೆಯ ಮೆರಿಟ್ ಫಲಿತಾಂಶವನ್ನು ಪ್ರಕಟಿಸಲಾಗಿದ.

ಜೂನ್ 14ರಂದು ಬೆಳಗ್ಗೆ 9 ಗಂಟೆಯಿಂದ ಆಯ್ಕೆಗೊಂಡ ವಿದ್ಯಾರ್ಥಿ/ನಿಯರ ಕೌನ್ಸಲಿಂಗ್‌ನ್ನು ಅಫಜಲ್‌ಪುರ್ ಟಕ್ಕೆಯಲ್ಲಿರುವ ಸರ್ಕಾರಿ ಮುಸ್ಲಿಂ ವಸತಿ ಶಾಲೆಯಲ್ಲಿ ಮಾಡಲಾಗುವುದು. ಸದರಿ ವಿದ್ಯಾರ್ಥಿಗಳು ತಮ್ಮ ಸಿಂಧೂವಾದ ಪ್ರವೇಶ ಪ್ರಮಾಣ ಪತ್ರವನ್ನು, ತಾವು ಆಯ್ಕೆಯೊಳಿಸಿದ ವಸತಿ ಶಾಲೆಗಳಿಗೆ ಸಂಬಂಧಪಟ್ಟ ದಾಖಲಾತಿಗಳನ್ನು ತೆಗೆದುಕೊಂಡು ಜೂನ್ 21ರಂದು ಪ್ರವೇಶ ಪಡೆಯಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಡಾ.ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳ ಪ್ರಾಂಶುಪಾಲರು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ದೂ.08352–295523ಕ್ಕೆ ಸಂಪರ್ಕಿಸಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಆಸ್ತಿ ತೆರಿಗೆ ಪಾವತಿಸಲು ಜುಲೈ31ರವರೆಗೆ ರಿಯಾಯತಿ**

ವಿಜಯಪುರ, ಜೂನ್ 12: ವಿಜಯಪುರ ಮಹಾನಗರಪಾಲಿಕೆ ವ್ಯಾಪ್ತಿಯ ಘೋಷಿತ ಆಸ್ತಿ ತೆರಿಗೆದಾರರಿಗೆ 2024–25ನೇ ಸಾಲಿನ ಪ್ರಸಕ್ತ ಸಾಲಿನ ಆಸ್ತಿ ತೆರಿಗೆಯ ಮೇಲೆ ಶೇ.5ರಷ್ಟು ರಿಯಾಯಿತಿಯನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ. ಕಾರಣ 2024–25ನೇ ಸಾಲಿನ ಆಸ್ತಿ ತೆರಿಗೆಯನ್ನು ನಿಗಧಿತ ಅವಧಿಯಲ್ಲಿ ಪಾವತಿಸಿ ರಿಯಾಯಿತಿಯ ಲಾಭ ಪಡೆದುಕೊಳ್ಳಲು ತಿಳಿಸಿದೆ. ಒಂದು ವೇಳೆ ನಿಗಧಿತ ಅವಧಿಯಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಭರಣಾ ಮಾಡದೇ ಹೋದಲ್ಲಿ ಮಹಾನಗರಪಾಲಿಕೆ ಕಾಯ್ದೆ–1976ರಂತೆ ದಂಡ ಹಾಗೂ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮಹಾನಗರಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಎಸ್‌ಎಸ್‌ಎಲ್‌ಸಿ ಪರೀಕ್ಷೆ – 2 : 144 ಸೆಕ್ಷನ್ ಜಾರಿ**

ವಿಜಯಪುರ, ಜೂನ್ 12 (ಕರ್ನಾಟಕ ವಾರ್ತೆ): ಎಸ್‌ಎಸ್‌ಎಲ್‌ಸಿ ಪರೀಕ್ಷೆ – 2 ಜೂನ್ 14 ರಿಂದ 22 ರವರೆಗೆ ನಡೆಯಲಿದ್ದು, ಒಟ್ಟು 26 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಪರೀಕ್ಷೆಯನ್ನು ಸುಗಮವಾಗಿ ಮತ್ತು ಪರೀಕ್ಷಾ ಅವ್ಯವಹಾರ ತಡೆಗಟ್ಟಲು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 144 ಸೆಕ್ಷನ್ ಜಾರಿಗೊಳಿಸಿ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ಭೂಬಾಲನ್ ಆದೇಶಿಸಿದ್ದಾರೆ.

ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಅಂಗಡಿ, ಇಂಟರ್ ನೆಟ್ ಕೇಂದ್ರ ಮುಚ್ಚುವಂತೆ ಹಾಗೂ ಪರೀಕ್ಷಾ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಯಾವುದೇ ಅಧಿಕಾರಿ ಅಥವಾ. ಸಿಬ್ಬಂದಿ ಮೊಬೈಲ್ ಫೋನ್ ತರುವುದನ್ನು ಹಾಗೂ ಬಳಸುವುದನ್ನು ನಿಷೇಧಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.15 ರಂದು ಜಿಲ್ಲಾ ಮಟ್ಟದ ಕೆಡಿಪಿ ಸಭೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಮಟ್ಟದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ 2023–24ರ ನಾಲ್ಕನೆ ತ್ರೈಮಾಸಿಕದ ಹಾಗೂ 2024–25ರ ಒಂದನೇ ತ್ರೈಮಾಸಿಕದ ಸಭೆಯು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜೂನ್ 15ರಂದು ಬೆಳಿಗ್ಗೆ 10:30ಕ್ಕೆ ನಗರದ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲಕಾರ್ಮಿಕ ವಿರೋಧಿ ದಿನಾಚರಣೆ ಇಂದು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಾರ ಬೆಳಿಗ್ಗೆ 10ಗಂಟೆಗೆ ಬಾಲಕಾರ್ಮಿಕ ವಿರೋಧಿ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ತಾಲೂಕು ಕಾನೂನು ಸೇವಾ, ಸಮಿತಿ ನ್ಯಾಯವಾದಿಗಳ ಸಂಘ, ಕಾರ್ಮಿಕ ಇಲಾಖೆ ಹಾಗೂ ಇತರ ಎಲ್ಲ ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾದ ಈ ಕಾರ್ಯಕ್ರಮವನ್ನು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ರವೀಂದ್ರಕುಮಾರ ಕಟ್ಟಿಮನಿ ಉದ್ಘಾಟಿಸುವರು.

ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಸಂಪತ್ತಕುಮಾರ ಬಳೂಳಗಿಡದ ಉಪಸ್ಥಿತಿಯಲ್ಲಿ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್.ಮಾಲಗತ್ತಿ ಅಧ್ಯಕ್ಷತೆ ವಹಿಸುವರು. ಸಹಾಯಕ ಸರ್ಕಾರಿ ಅಭಿಯೋಜಕರಾದ ನಾಘರಾಜ ಪೂಜಾರ ಮತ್ತು ಬಸವರಾಜ ಆಹೇರಿ, ತಹಶೀಲ್ದಾರ ಬಸವರಾಜ ನಾಗರಾಳ, ಅಪರ ಸರ್ಕಾರಿ ವಕೀಲ ಎಚ್.ಎಲ್.ಸರೂರ, ಪ್ರಭಾರ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಎಸ್.ಎಸ್. ಕಲ್ಮನಿ, ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ಸಾವಳಗಿ, ಪ್ರಭಾರ ಕಾರ್ಮಿಕ ನಿರೀಕ್ಷಕ ಆಯ್.ಎಸ್.ಇನಾಮದಾರ, ಸರ್ಕಾರಿ ಪ್ರೌಢ ಶಾಲೆಯ ಮುಖ್ಯಾಧ್ಯಾಪಕ ಎಸ್.ಎಸ್.ಕವಡಿಮಟ್ಟಿ, ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ, ಶಿಶು ಅಭಿವೃದ್ಧಿ ಅಧಿಕಾರಿ ಶಿವಮೂರ್ತಿ ಕುಂಬಾರ ಅತಿಥಿಗಳಾಗಿ ಆಗಮಿಸಲಿದ್ದು ಹಿರಿಯ ನ್ಯಾಯವಾದಿ ಎನ್.ಆರ್.ಮೊಕಾಶಿ ಬಾಲಕಾರ್ಮಿಕ ನಿಷೇದ ಕಾಯ್ದೆ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

### ಗ್ರಾಪಂ ಜನಪ್ರತಿನಿಧಿಗಳಿಗೆ ವಿಜಯಪುರ ಜಿಪಂ ಸಿಇಓ ರಿಷಿ ಆನಂದ ಸೂಚನೆ

# ಮಳೆಯಿಂದಾಗಬಹುದಾದ ಅನಾಹುತ ತಡೆಗಟ್ಟಲು ಕ್ರಮ ಕೈಗೊಳ್ಳಿ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಡೋಣಿ ನದಿಯಿಂದ ಯಾಳವಾರ ಗ್ರಾಮದ ಸೇತುವೆ ಸಂಪೂರ್ಣ ಜಲಾವೃತವಾಗಿದೆ. ನೀರು ಸರಾಗವಾಗಿ ಹೋಗಲು ಕ್ರಮ ಕೈಗೊಳ್ಳುವುದು ಅಗತ್ಯವಾಗಿದೆ ಎಂದು ವಿಜಯಪುರ ಜಿಲ್ಲಾ ಪಂಚಾಯಿತಿ ಸಿಇಓ ರಿಷಿ ಆನಂದ ಹೇಳಿದರು.

ತಾಲ್ಲೂಕಿನ ಸಾತಿಹಾಳ ಹಾಗೂ ಯಾಳವಾರ ಗ್ರಾಮಗಳ ಪಂಚಾಯಿತಿ ಹಾಗೂ ಸೇತುವೆಗಳಿಗೆ ಬುಧವಾರ ಭೇಟಿ ನೀಡಿ ಮಾತನಾಡಿದರು.

ಈ ವರ್ಷ ಅತೀ ಹೆಚ್ಚು ಮಳೆಯಾಗುವ ನಿರೀಕ್ಷೆ ಇರುವುದರಿಂದ ಗ್ರಾಮದಲ್ಲಿ ಮಣ್ಣಿನ ಮನೆ ಮತ್ತು ಶಿಥಿಲಗೊಂಡ ಮನೆಗಳನ್ನು ಗುರುತಿಸಿ ಅಂಥ ಮನೆಗಳ ಸದಸ್ಯರನ್ನು ಬೇರೆ ಕಡೆ ಸ್ಥಳಾಂತರಿಸಬೇಕು ಎಂದು ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳ ಜೊತೆ ಮಾತನಾಡಿ, ಮಳೆಯಿಂದಾಗಿ ಆಗಬಹುದಾದ ಅನಾಹುತಗಳನ್ನು ತಡೆಗಟ್ಟಲು ಯಾವೆಲ್ಲ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದನ್ನ ತಾವೆಲ್ಲರೂ ಸೇರಿ ನಿರ್ಧರಿಸಬೇಕು ಎಂದು ಹೇಳಿದರು.

ನಂತರ ಯಾಳವಾರ ಸೇತುವೆಗೆ ಭೇಟಿ ನೀಡಿ, ಹೆಚ್ಚಾಗಿ ಮಳೆಯಾದ ಸಂದರ್ಭದಲ್ಲಿ ಗ್ರಾಮಸ್ಥರು ಸೇತುವೆಯಲ್ಲಿ ಸಂಚಾರ ಮಾಡದಂತೆ ನೋಡಿಕೊಳ್ಳಬೇಕು. ಇದರಿಂದಾಗುವ ಅನಾಹುತಗಳನ್ನು ಮುಂಜಾಗ್ರತ ಕ್ರಮ ಕೈಗೊಂಡು ಜಿಲ್ಲಾ ಪಂಚಾಯತಿ ವರದಿ ನೀಡಬೇಕು ಎಂದು ಪಿಡಿಓ ಅವರಿಗೆ ಸೂಚಿಸಿದರು.

ತಾಲ್ಲೂಕಿನ ಶಾಲಾ ಕಾಲೇಜುಗಳಲ್ಲಿ ಶಿಥಿಲಗೊಂಡ ಕೊಠಡಿಗಳನ್ನು ದುರಸ್ತಿ ಮಾಡಬೇಕು. ಅಪಾಯದಲ್ಲಿರುವ ಕೊಠಡಿಗಳಲ್ಲಿ ತರಗತಿಗಳನ್ನು ನಡೆಸಬಾರದು ಎಂದು ಬಸವನ ಬಾಗೇವಾಡಿ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು.

ಸಾತಿಹಾಳ ಗ್ರಾಮದ ಸೇತುವೆ ಮೇಲ್ದರ್ಜೆಗೇರಿಸಲು ಶಿಫಾರಸ್ಸು ಮಾಡಿ ಎಂದು ಎಇ ಅವರಿಗೆ ಹೇಳಿದರು.

ಗ್ರಾಮಗಳ ಭೇಟಿ ನಂತರ ಪಟ್ಟಣದ ತಾಲ್ಲೂಕು ಪಂಚಾಯಿತಿಗೆ ಭೇಟಿ ನೀಡಿ, ಹಳೆಯ ಪ್ರವಾಸಿ ಮಂದಿರದಲ್ಲಿ ತಾಲ್ಲೂಕು ಪಂಚಾಯಿತ ಕಚೇರಿಯನ್ನು ಹೊಂದಿದ್ದು, ಈ ಕಟ್ಟಡ ಹಳೆಯದಾಗಿದೆ. ಹೊಸ ತಾಲ್ಲೂಕು ಪಂಚಾಯಿತಿ ಸ್ಥಳಾವಕಾಶಕ್ಕೆ ಜಿಲ್ಲಾ ಪಂಚಾಯಿತಿಗೆ ಪ್ರಸ್ತಾವನೆ ಕಳುಹಿಸಿ ಎಂದು ಕಾರ್ಯನಿರ್ವಾಹಕ ಅಧಿಕಾರಿಗೆ ಸೂಚಿಸಿದರು.

ಪ್ರತಿ ಶನಿವಾರ ತಾಲ್ಲೂಕು ಪಂಚಾಯಿತಿ ಸ್ವಚ್ಛತಾ ದಿನವನ್ನಾಗಿ ಆಚರಿಸಿ ಆವರಣವನ್ನು ಶುಚಿತ್ವದಿಂದ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯನಿರ್ವಾಹಕ ಅಧಿಕಾರಿ ರಾಮು ಅಗ್ನಿ, ಸಹಾಯಕ ನಿರ್ದೇಶಕ ಶಿವಾನಂದ ಮೂಲಿಮನಿ (ಪಂಚಾಯತ್ ರಾಜ್), ಆರ್‌ಎನ್‌ಎಸ್ ಎಇ ಎಚ್.ಎಮ್.ಸಾರವಾಡ, ಬಸವನ ಬಾಗೇವಾಡಿ ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ, ಪಿಆರ್‌ಇಡಿ ಎಇಇ ಜಿ.ವಾಯ್. ಮುರಾಳ, ಐಇಸಿ ಸಂಯೋಜಕ ಸಿದ್ದು ಕಾಂಬಳೆ, ಸಾತಿಹಾಳ ಪಿಡಿಓ ಎಂ.ಎನ್.ಕತ್ತಿ, ಯಾಳವಾರ ಪಿಡಿಓ ಮಲ್ಲು ಮಸಳಿ, ಗ್ರಾಮ ಪಂಚಾಯಿತಿ ಹಾಗೂ ತಾಲೂಕಾ ಪಂಚಾಯತಿ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ನೂತನ ತಾಲೂಕುಗಳಿಗೆ ಸರ್ಕಾರಿ ಕಚೇರಿಗಳ ಮಂಜೂರಿಗೆ ಸಿಎಂಗೆ ಮನವಿ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ವಿಜಯಪುರ ಜಿಲ್ಲೆಯಲ್ಲಿರುವ ನೂತನ ಎಂಟು ತಾಲೂಕುಗಳಿಗೆ ಎಲ್ಲ ಸರ್ಕಾರಿ ಕಚೇರಿಗಳನ್ನು ಮಂಜೂರು ಮಾಡಿ ರೈತರಿಗೆ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಬುಧವಾರ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಘಟನಾ ಕಾರ್ಯದರ್ಶಿ, ಅವಳಿ ಜಿಲ್ಲೆಯ ಉಸ್ತುವಾರಿ ಅಶೋಕ ಹಾರಿವಾಳ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಿದರು.

ಅಶೋಕ ಹಾರಿವಾಳ ಅವರು ಸಿಎಂ ಅವರಿಗೆ ತಮ್ಮ ಘನ ಸರ್ಕಾರ ನೂತನ ತಾಲೂಕುಗಳನ್ನು ಘೋಷಣೆ ಮಾಡಿದ್ದು ಶ್ಲಾಘನೀಯ. ನೂತನ ತಾಲೂಕುಗಳು ರಚನೆಯಾಗಿ ಸುಮಾರು ವರ್ಷಗಳು ಕಳೆದರೂ ಎಲ್ಲ ಸರ್ಕಾರಿ ಕಚೇರಿಗಳು ಇಲ್ಲದೇ ಇರುವದರಿಂದಾಗಿ ರೈತರಿಗೆ, ಸಾರ್ವಜನಿಕರಿಗೆ ಆಡಳಿತಾತ್ಮಕವಾಗಿ ತುಂಬಾ ತೊಂದರೆಯಾಗಿದೆ. ಕೂಡಲೇ ಎಲ್ಲ ಎಂಟು ತಾಲೂಕುಗಳಿಗೆ ಎಲ್ಲ ಸರ್ಕಾರಿ ಕಚೇರಿಗಳನ್ನು ಮಂಜೂರು ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿಗೆ ಸಿಎಂ ಅವರು ಸ್ಪಂದಿಸಿದರು ಎಂದು ದೂರವಾಣಿ ಮೂಲಕ ಪತ್ರಿಕೆಗೆ ತಿಳಿಸಿದರು.

# ಬೇಟಿ ಬಚಾವೋ – ಬೇಟಿ ಪಡಾವೋ ಜಾಥಾ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಮಹಿಳಾ ವೇದಿಕೆ, ಐಕ್ಯೂಎಸಿ ಸಹಯೋಗದಲ್ಲಿ ಬೇಟಿ ಬಚಾವೊ ಬೇಟಿ ಪಡಾವೋ ಜನಜಾಗೃತಿ ಜಾಥಾವನ್ನು ಬುಧವಾರ ಹಮ್ಮಿಕೊಳ್ಳಲಾಗಿತ್ತು. ಮಹಾವಿದ್ಯಾಲಯದ ಮುಂಭಾಗ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಜಾಥಾಕ್ಕೆ ಚಾಲನೆ ನೀಡಿದರು.

ಜಾಥಾವು ಕಾಲೇಜಿನಿಂದ ಆರಂಭಗೊಂಡು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಸವೇಶ್ವರ ವೃತ್ತದಲ್ಲಿ ಜಾಥಾ ಸಮಾವೇಶಗೊಂಡ ನಂತರ ಜಾಥಾ ಉದ್ದೇಶಿಸಿ ಮಹಾವಿದ್ಯಾಲಯದ ಮಹಿಳಾ ವೇದಿಕೆ ಅಧ್ಯಕ್ಷೆ, ಇತಿಹಾಸ ಪ್ರಾಧ್ಯಾಪಕಿ ಡಾ.ಎಸ್.ಬಿ.ಜನಗೊಂಡ ಮಾತನಾಡಿ, ಪ್ರತಿಯೊಬ್ಬ ಪುರುಷನಿಗೆ ಹೆಣ್ಣು ತಾಯಿಯಾಗಿ, ಸಹೋದರಿಯಾಗಿ, ಪತ್ನಿಯಾಗಿ ಬೇಕು. ಅದೇ ಅವಳು ಮಗಳಾಗಿ ಬೇಡವಾಗಿರುವದು ನೋವಿನ ಸಂಗತಿ. ಇಂದು ಶಿಕ್ಷಣವು ಎಲ್ಲರ ಹಕ್ಕಾಗಿ ಪರಿವರ್ತನೆಯಾಗಿದ್ದರೂ ಸಹ ಸಮಾಜದಲ್ಲಿ ಹೆಣ್ಣಿನ ಶೋಷಣೆ ನಿಲ್ಲುತ್ತಿಲ್ಲ. ಪ್ರಜ್ಞಾವಂತರಾದ ನಾವೆಲ್ಲರೂ ಹೆಣ್ಣು ಭ್ರೂಣ ಹತ್ಯೆ ತಡೆಯವಲ್ಲಿ ಮುಂದಾಗಬೇಕು. ಆಗ ಮಾತ್ರ ಪ್ರತಿ ಪುರುಷನ ಬಾಳಿನಲ್ಲಿ ಹೆಣ್ಣು ತಾಯಿಯಾಗಿ, ಸಹೋದರಿಯಾಗಿ, ಪತ್ನಿಯಾಗಿ, ಮಗಳಾಗಿ ಬರಲು ಸಾಧ್ಯ. ಎಲ್ಲರೂ ಹೆಣ್ಣುಮಕ್ಕಳನ್ನು ಬೆಳೆಸುವ ಕಾರ್ಯ ಮಾಡಬೇಕೆಂದರು.

ಜಾಥಾದಲ್ಲಿ ಕಾಲೇಜಿನ ಐಕ್ಯೂಎಸಿ ಮತ್ತು ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ದಿಲೀಪಕುಮಾರ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ರವೀಂದ್ರಗೌಡ ಕೆ.ಎನ್., ಎ□□□□□□□ಸ್ , ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ವೈ.ಬಿ.ನಾಯಕ, ಪ್ರೊ.ಜಯರಾಮರೆಡ್ಡಿ, ಪ್ರೊ.ಎಂ.ಕೆ.ಯಾಧವ, ಪ್ರೊ.ಪಿ.ಎಸ್. ಹೊರಕೇರಿ, ಪ್ರೊ.ಆರ್.ಎನ್. ರಾಠೋಡ, ಬೋಧಕೇತರ ಸಿಬ್ಬಂದಿ, ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜಗತ್ತಿನ ಪಿಡುಗು ಬಾಲಕಾರ್ಮಿಕ ಪದ್ಧತಿಗೆ ಕಡಿವಾಣ ಹಾಕಿ :ಬಂಡೆ

**ಉದಯರಶ್ಮಿ ನ್ಯೂಸ್**




ಇಂಡಿ: ಬಾಲಕಾರ್ಮಿಕ ಪದ್ಧತಿ ಜಗತ್ತಿನ ಪಿಡುಗು. ಮಕ್ಕಳನ್ನು ದುಡಿಸುವ ಪದ್ಧತಿ ರಾಷ್ಟ್ರಕ್ಕೆ ಕಳಂಕವಾಗಿದ್ದು, ಮಕ್ಕಳ ದುಡಿಮೆ ಮಾನವ ಅಭಿವೃದ್ಧಿಗೆ ಮಾರಕವಾಗಿದೆ. ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ, ಈ ಪದ್ಧತಿಯ ಕಡಿವಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ನಿಮಿತ್ತ 'ಮಕ್ಕಳ ಶೈಕ್ಷಣಿಕ ಸವಲತ್ತುಗಳು'ಕುರಿತು ಮಾತನಾಡಿದರು.

ಶಿಕ್ಷಣದಿಂದ ಬದುಕು ಕಟ್ಟಿಕೊಂಡು, ಪ್ರಗತಿ ಹೊಂದಲು ಸಾಧ್ಯ ಎಂಬ ಅರಿವು ಪೋಷಕರಲ್ಲಿ ಮೂಡಿಸಬೇಕು. ಬಾಲಕಾರ್ಮಿಕ ಪದ್ಧತಿ ವಿರುದ್ಧದ ನಿಜವಾದ ಅಸ್ತ್ರ ಎಂದರೆ ಸಾರ್ವತ್ರಿಕ ಶಿಕ್ಷಣ. ಪೋಷಕರು ಮಕ್ಕಳನ್ನು ಬಾಲ ಕಾರ್ಮಿಕರನ್ನಾಗಿಸದೆ ಅವರ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ಶಿಕ್ಷಕ ಎಸ್ ಎಸ್ ಅರಬ ಮಾತನಾಡಿ, ಬಾಲ್ಯವು ಸಂತೋಷ, ನಗು ಮತ್ತು ಶಿಕ್ಷಣದ ಸಮಯವಾಗಿರಬೇಕು. ಬಾಲ್ಯಾವಸ್ಥೆಯಲ್ಲಿ ಮಕ್ಕಳನ್ನು ಮೂಲಭೂತ ಶಿಕ್ಷಣ, ಜ್ಞಾನ ಮತ್ತು ಕಲಿಕೆಯ ಪ್ರಕ್ರಿಯೆಯಲ್ಲಿ ತೊಡಗಿಸಬೇಕು. ಅವರ ಹಕ್ಕುಗಳನ್ನು ರಕ್ಷಿಸಬೇಕಾದದ್ದು ಪ್ರತಿಯೊಬ್ಬ ಪ್ರಜ್ಞಾವಂತ ನಾಗರಿಕರ ಕರ್ತವ್ಯ ಎಂದು ಹೇಳಿದರು.

ಶಿಕ್ಷಕಿ ಎನ್ ಬಿ ಚೌಧರಿ ಬಾಲ ಕಾರ್ಮಿಕ ವಿರೋಧಿ ದಿನದ ಪ್ರತಿಜ್ಞಾ ವಿಧಿ ಬೋಧಿಸಿದರು. ಶಿಕ್ಷಕಿ ಎಸ್ ಪಿ ಪೂಜಾರಿ, ಮಕ್ಕಳು, ಪಾಲಕರು ಉಪಸ್ಥಿತರಿದ್ದರು.

# ಅಕ್ರಮ ಮದ್ಯ ಮಾರಾಟಗಾರನ ಮೇಲೆ ಪ್ರಕರಣ ದಾಖಲು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಆಲೂರು ಗ್ರಾಮದ ಪಾನ್‌ಶಾಪ್ ನಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದ ವ್ಯಕ್ತಿಯ ಮೇಲೆ ಪ್ರಕರಣ ದಾಖಲಾಗಿದೆ.

ಬಸಪ್ಪ ಭೀಮಪ್ಪ ಬಿರಾದಾರ ಅಕ್ರಮ ಮದ್ಯ ಮಾರಾಟಗಾರ. ಈತನು ತನ್ನ ಹತ್ತಿರ ಯಾವುದೇ ಪರ್ಮಿಟ ವ ಲೈಸನ್ಸ್ ಇಲ್ಲದೇ ಅನಧಿಕೃತವಾಗಿ ಮದ್ಯ ತುಂಬಿದ ಟೆಟ್ರಾ ಪ್ಯಾಕೇಟ್‌ಗಳನ್ನು ತನ್ನ ತಾಬಾದಲ್ಲಿ ಇಟ್ಟುಕೊಂಡು ಆಲೂರ ಗ್ರಾಮದ ಬಸ್ ನಿಲ್ದಾಣ ಹತ್ತಿರ ಇರುವ ತನ್ನ ಪಾನ್ ಶಾಪ್ ನಲ್ಲಿ ಅಕ್ರಮ ಮದ್ಯ ಮಾರಾಟ ಮಾಡುವಾಗ ಪೊಲೀಸರ ಕೈಗೆ ಸಿಕ್ಕಿದ್ದು ಪಿಎಸ್‌ಐ ಸಂಜೀವ ತಿಪರೆಡ್ಡಿ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದೆ.

ಆರೋಪಿತನಿಂದ 180 ಎಮ್‌ಎಲ್‌ದ ಬ್ಯಾಗ್‌ಪೈಪರ್ ಅಂತಾ ಬರೆದ ಒಟ್ಟು 12 ವಿಸ್ಕಿ ಪ್ಯಾಕೆಟ್‌ಗಳು, 12 ಟುಬರ್ಗ ಪ್ರೀಮಿಯಮ್ ಬಿಯರ್ ಬಾಟಲಿಗಳನ್ನು ವಶಕ್ಕೆ ಪಡೆಯಲಾಗಿದೆ.

# ಇಂಡಿ ಅಗ್ನಿಶಾಮಕ ಸಿಬ್ಬಂದಿಗೆ ಗೃಹ ಸಚಿವ ಜಿ.ಪರಮೇಶ್ವರ ಗೌರವ



ಉದಯರಶ್ಮಿ ನ್ಯೂಸ್

ಇಂಡಿ: ತಾಲೂಕಿನ ಲಚ್ಯಾಣ ಗ್ರಾಮದಲ್ಲಿ ಹೊಲದಲ್ಲಿ 20 ಅಡಿ ಆಳದ ತೆರೆದ ಕೊಳವೆ ಬಾವಿಗೆ ಆಕಸ್ಮಿಕವಾಗಿ ಬಿದ್ದ ಎರಡು ವರ್ಷದ ಮಗು ಸಾತ್ವಿಕನನ್ನು ರಕ್ಷಿಸಲು ಸತತ 20 ಗಂಟೆಗಳ ರಕ್ಷಣಾ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ ಮಗುವನ್ನು ರಕ್ಷಿಸುವಲ್ಲಿ ಯಶಸ್ವಿ ತಂಡದಲ್ಲಿ ಇಂಡಿಯ ಅಗ್ನಿಶಾಮಕ ತಂಡದಲ್ಲಿದ್ದ ಆರು ಜನ ಸಿಬ್ಬಂದಿಯನ್ನು ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಡಾ. ಜಿ.ಪರಮೇಶ್ವರ ಪ್ರಶಂಸನಾ ಪತ್ರ ನೀಡಿ ಗೌರವಿಸಿದ್ದಾರೆ.

ಅಗ್ನಿ ಶಾಮಕ ತಂಡದ ಠಾಣಾಧಿಕಾರಿ ಗುರುಪಾದಪ್ಪ ತೇಲಿ, ಸಹಾಯಕ ಠಾಣಾಧಿಕಾರಿ ದೇವದಾನಮ್ಮ, ಮತ್ತು ಮುಬಾರಕ ಇಂಡಿಕರ, ಅನೀಲ ಚವ್ಹಾಣ, ಮಾರು ರಾಠೋಡ, ಮಹಮ್ಮದ ಅಲಿ ಬಂಥನಾಳ ಇವರಿಗೆ ರಾಜ್ಯ ಗೃಹ ಸಚಿವ ಡಾ. ಜಿ.ಪರಮೇಶ್ವರ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಗೌರವಿಸಿದರು.

ಈ ರಕ್ಷಣಾ ಕಾರ್ಯಾಚರಣೆಯಲ್ಲಿ ತೋರಿದ ಧೈರ್ಯ ಹಾಗೂ ಸಮಯಪ್ರಜ್ಞೆ ಅನುಕರಣೀಯ. ಈ ಕುರಿತು ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಪೋಲಿಸ್ ಮಹಾ ನಿರ್ದೇಶಕ ಹಾಗೂ ಮಹಾ ನಿರ್ದೇಶಕರು ಕರ್ನಾಟಕ ಅಗ್ನಿಶಾಮಕ ದಳ ಮತ್ತು ತುರ್ತು ಸೇವೆಗಳ ಕಮಲ ಪಂತ ಪ್ರಶಂಸನಾ ಪತ್ರ ನೀಡಿ ಗೌರವಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಜ್ಞಾನದ ಹಸಿವು ಅವಶ್ಯಕ :ನಂದನೂರ

ಉದಯರಶ್ಮಿ ನ್ಯೂಸ್



ಚಿಮ್ಮಡ: ಶಾಲೆ ಪ್ರೌಢಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಉತ್ತಮ ಅಂಕಗಳಿಸಲು ಛಲದೊಂದಿಗೆ ಜ್ಞಾನದ ಹಸಿವು ಇರಬೇಕು ಆವಾಗಲೇ ಸಾಧನೆ ಮಾಡಲು ಸಾಧ್ಯ ಎಂದು ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಬಿ.ಕೆ.ನಂದನೂರ ಹೇಳಿದರು.

ಗ್ರಾಮದ ಸರಕಾರಿ ಪ್ರೌಢಶಾಲೆಗೆ ಸೋಮವಾರ ಭೇಟಿನೀಡಿ ಪರೀಶೀಲನೆ ನಡೆಸಿ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸುತ್ತ ಮಾತನಾಡಿದ ಅವರು ಸತತ ಪ್ರಯತ್ನವೇ ಯಶಸ್ಸಿನ ಮೂಲವಾಗಿದ್ದು ಇರುವೆಯ ಪ್ರಯತ್ನಶೀಲತೆ ನಮಗೆಲ್ಲ ಮಾದರಿಯಾಗಬೇಕೆಂದ ಅವರು ನೂತನ ಪರೀಕ್ಷಾ ಪದ್ದತಿಗಳ ಅನುಕೂಲತೆಗಳ ಕುರಿತು ವಿದ್ಯಾರ್ಥಿಗಳನ್ನು ಅಭಿ ಪ್ರೇರಣೆಗೊಳಿಸಿ ಮಾರ್ಗದರ್ಶನ ನೀಡಿದರು.

ಗ್ರಾಮೀಣ ಭಾಗದ ಈ ಶಾಲೆಯ ವಾತಾವರಣ, ಕಲಿಕಾ ಗುಣಮಟ್ಟದ ಕುರಿತು ಹರ್ಷವ್ಯಕ್ತಪಡಿಸಿದ ಅಧಿಕಾರಿಗಳು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಸಾಧನೆ ಮಾಡಿರುವುದಕ್ಕೆ ಪ್ರಭಾರ ಮುಖ್ಯೋಪಾದ್ಯಾಯೆ ಸೇರಿದಂತೆ ಶಿಕ್ಷಕ ವೃಂದವನ್ನು ಹಾಗೂ ಎಸ್ಡಿಎಂಸಿ ಪಧಾಧಿಕಾರಿಗಳನ್ನು ಅಭಿನಂದಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎ.ಕೆ. ಬಸಣ್ಣವರ, ಕ್ಷೇತ್ರ ಸಮನ್ವಯ ಅಧಿಕಾರಿ ರಮೇಶ ಅವಟಿ, ಪ್ರೌಢಶಾಲೆಯ ಪ್ರಭಾರ ಮುಖ್ಯೋಪಾದ್ಯಾಯೆ ಶ್ರೀಮತಿ ಎಂ.ಎಸ್. ಜಿಟ್ಟಿ ಉಪಸ್ಥಿತರಿದ್ದರು.

# ಟಗರು ಕಾಳಗದಲ್ಲಿ ಶಿರೋಳ ಗ್ರಾಮದ ಟಗರು ಪ್ರಥಮ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಕುಷ್ಟಗಿ ತಾಲೂಕಿನಲ್ಲಿ ನಡೆದ ಟಗರು ಕಾಳಗದಲ್ಲಿ ತಾಲೂಕಿನ ಶಿರೋಳ ಗ್ರಾಮದ ಟಗರು ಪ್ರಥಮ ಬಹುಮಾನವಾಗಿ ಎಚ್‌ಎಫ್ ಡಿಲಕ್ಸ್ ದ್ವಿಚಕ್ರ ವಾಹನ ಪಡೆದು ಬೀಗಿದೆ.

ಶಿರೋಳ ಗ್ರಾಮದ ಪಮ್ಮು ದಾಸರ ಸಾಕಿದ್ದ ಟಗರು ಅಂದಾಜು 80ಕೆಜಿ ಇದ್ದು ಯಾದಗಿರಿ ಜಿಲ್ಲೆಯ ಕೊಡೆಕಲ್ ಗ್ರಾಮದಿಂದ ಖರೀದಿಸಿದ್ದರಂತೆ. ಪ್ರತಿನಿತ್ಯ ಹುರುಳಿ, ಹಾಲು, ತತ್ತಿ, ಗೋದಿ, ಕಡಲೆಬೇಳೆ ಸೇರಿದಂತೆ ವಿಟ್ಯಾಮಿನ್ ಫುಡ್ ತಿನ್ನುವ ಈ ಟಗರು ಕಳೆದ ಹತ್ತಾರು ಕಾಳದಲ್ಲಿ ಬಹುಮಾನವನ್ನು ತಂದು ಕೊಟ್ಟಿದೆ. ಈ ವರೆಗೂ ಭಾಗವಹಿಸಿದ್ದ 11 ಕಾಳಗದಲ್ಲಿ 6 ಪ್ರಥಮ, 3 ದ್ವಿತೀಯ, 3 ತೃತೀಯ 2 ಸಮಾಧಾನಕರ ಬಹುಮಾನವನ್ನು ಪಡೆದ ಈ ಟಗರಿಗೆ 2 ವರ್ಷ ವಯಸ್ಸು. ಟಗರು ಕಾಳಗದಲ್ಲಿ ಹೆಚ್ಚಿನ ಯಶಸ್ಸು ಪಡೆಯುತ್ತಿರುವ ಈ ಟಗರು ನಮ್ಮೂರಿನ ಹೆಮ್ಮೆ ಎಂದು ಸ್ಥಳೀಯ ನಿವಾಸಿ ಸೋಮು ಶಿರೋಳ ಮೆಚ್ಚಿಕೊಂಡಿದ್ದು ಟಗರು ಸಾಕುವ ಯುವಕ ಚಿಕ್ಕವನಾಗಿದ್ದರೂ ಟಗರುಗಳನ್ನು ತುಂಬಾ ಚನ್ನಾಗಿ ಬೆಳೆಸುತ್ತಿದ್ದಾನೆ. ಈತ 2,4,6,8 ಹಲ್ಲುಗಳುಳ್ಳ ಟಗರುಗಳನ್ನು ಸಾಕಿದ್ದು ಎಲ್ಲ ಟಗರುಗಳು ಕಾಳಗದಲ್ಲಿ ಒಳ್ಳೆ ಸಾಧನೆ ಮಾಡಿವೆ. ಇವನ ಸಾಧನೆ ನಮ್ಮೂರಿನ ಕೀರ್ತಿ ಹೆಚ್ಚಿಸಿದೆ ಎಂದಿದ್ದಾರೆ.



# ತರಕಾರಿ ತೋಟದಿಂದ ಬದನೇಕಾಯಿ ಕದ್ದು ತಪ್ಪಿಸಿಕೊಂಡ ಬುದ್ಧಿವಂತ ತೆನಾಲಿರಾಮ

ಉದಯರಶ್ಮಿ ನ್ಯೂಸ್

"ವಿದ್ಯಾರ್ಥಿ ನಿಧಿ" ಮಕ್ಕಳ ಕಥೆ

– ಸಂತೋಷ್ ರಾವ್ ಪೆರ್ಮುಡ, ಪೆರ್ಮುಡ ಮನೆ, ಪಟ್ರಮೆ ಗ್ರಾಮ ಮತ್ತು ಅಂಚೆ ಬೆಳ್ತಂಗಡಿ ತಾಲೂಕು,





ಕೃಷ್ಣದೇವರಾಯನ ಆಸ್ಥಾನದಲ್ಲಿ ತೆನಾಲಿರಾಮನೆಂಬ ಆಸ್ಥಾನ ವಿದೂಷಕನಿದ್ದನು. ತೆನಾಲಿರಾಮನಿಗೆ ರಾಜನು ಅರಮನೆಯ ಸಮೀಪದಲ್ಲೇ ಮನೆಯನ್ನೂ ನಿರ್ಮಿಸಿ ಅಲ್ಲಿ ವಾಸಿಸಲು ಅನುಕೂಲ ಮಾಡಿಕೊಟ್ಟಿರುತ್ತಾನೆ. ಒಂದು ದಿನ ಕೃಷ್ಣದೇವರಾಯ ಆಸ್ಥಾನದ ಪಂಡಿತರಿಗೆ ಮತ್ತು ಸಿಬ್ಬಂದಿಗಳಿಗೆ ಭೋಜನ ಕೂಟವನ್ನು ಏರ್ಪಡಿಸುತ್ತಾನೆ. ಈ ಭೋಜನ ಕೂಟದಲ್ಲಿ ರಾಜನು ಅರಮನೆಯ ತೋಟದಲ್ಲೇ ಬೆಳೆದ ಬದನೆಕಾಯಿಯಿಂದ ಸಾಂಬಾರನ್ನು ತಯಾರಿಸಿ ಬಡಿಸುತ್ತಾನೆ. ಊಟದಲ್ಲಿ ಬದನೆಯ ಸಾಂಬಾರಿನ ರುಚಿಗೆ ಎಲ್ಲರೂ ಎರಡೆರಡು ಮೂರು ಮೂರು ಬಾರಿ ಸಾಂಬಾರು ಬಡಿಸಿಕೊಂಡು ತಿಂದು ತೇಗುತ್ತಾರೆ. ಊಟ ಮುಗಿದ ಬಳಿಕ ಎಲ್ಲರ ಬಾಯಿಯಲ್ಲೂ ರಾಜನ ತರಕಾರಿ ತೋಟದಲ್ಲಿ ಬೆಳೆದಿದ್ದ ಬದನೆಕಾಯಿಯ ರುಚಿಯದ್ದೇ ಮಾತು. ಅರಮನೆಯಲ್ಲಿ ಊಟ ಮಾಡಿ ಮನೆಗೆ ತೆರಳಿದ ತೆನಾಲಿರಾಮ ರಾಜನ ಆಸ್ಥಾನದ ತರಕಾರಿ ತೋಟದ ಬದನೆಯ ರುಚಿಯ ಕುರಿತ ಹೊಗಳಿಕೆಯಿಂದ ತೆನಾಲಿರಾಮನ ಹೆಂಡತಿಯ ಬಾಯಲ್ಲಿ ನೀರೂರಲಾರಂಭಿಸಿತು. ಹೇಗಾದರೂ ಮಾಡಿ ಕೃಷ್ಣದೇವರಾಯನ ಆಸ್ಥಾನದ ತರಕಾರಿ ತೋಟದ ಬದನೆಕಾಯಿಯನ್ನು ನಮ್ಮ ಮನೆಗೂ ತಂದು ಸಾಂಬಾರು ಮಾಡಿ ತಿನ್ನಲೇಬೇಕೆಂದು ಹೆಂಡತಿ ಪಟ್ಟು ಹಿಡಿದುಬಿಟ್ಟಳು.


ತನ್ನ ತೋಟದ ಬದನೆಕಾಯಿಯ ಕುರಿತು ವಿಪರೀತ ಕಾಳಜಿಯಿದ್ದ ಕೃಷ್ಣದೇವರಾಯ ತೋಟವನ್ನು ಕಾವಲು ಕಾಯಲು ಕಾವಲುಗಾರರನ್ನು ನೇಮಿಸಿದ್ದಲ್ಲದೆ, ಒಂದು ಬದನೆಕಾಯಿ ಕಳುವಾದರೂ ಕಳವು ಮಾಡಿದವರ ಶಿರಚ್ಛೇದನ ಮಾಡಲು ಆಜ್ಞೆ ಮಾಡಿದ್ದ. ಈ ವಿಚಾರ ತೆನಾಲಿರಾಮನ ಹೆಂಡತಿಗೆ ತಿಳಿದಿದ್ದರೂ, ತೆನಾಲಿರಾಮ ವಿವರಿಸಿ ಹೇಳಿದರೂ ಹೆಂಡತಿ ತನ್ನ ಪಟ್ಟನ್ನು ಬಿಡಲೇ ಇಲ್ಲ. ಹೆಂಡತಿಯ ಹಠಕ್ಕೆ ಸೋತ ತೆನಾಲಿರಾಮ ತನ್ನ ಚಾಣಾಕ್ಷತನದಿಂದ ತೋಟದ ಕಾವಲುಗಾರರ ಕಣ್ತಪ್ಪಿಸಿ ಎರಡು ಬದನೆಕಾಯಿ ಕದ್ದು ತಂದು ಹೆಂಡತಿಗೆ ಕೊಡುತ್ತಾನೆ. ಹೆಂಡತಿ ಬದನೆ ಸಾಂಬಾರು ಮಾಡಿ ಗಡದ್ದಾಗಿ ಊಟ ಮಾಡುತ್ತಾಳೆ.

ತೆನಾಲಿರಾಮ ದಂಪತಿಗಳಿಗಿದ್ದ ಏಕೈಕ ನಾಲ್ಕು ವರ್ಷದ ಪುತ್ರ ಮನೆಯ ಮಾಳಿಗೆಯಲ್ಲಿ ನಿದ್ರಿಸುತ್ತಿದ್ದ. ಇಷ್ಟೊಂದು ರುಚಿಯಾದ ಬದನೆ ಸಾಂಬಾರನ್ನು ಮಗನಿಗೆ ಕೊಡದಿದ್ದರೆ ತಪ್ಪಾಗುತ್ತದೆಯೆಂದು ಹೆಂಡತಿ ಬೇಸರಿಸುತ್ತಾಳೆ. ಮಗ ಎಲ್ಲಾದರೂ ಅರಮನೆಯ ಬದನೆಕಾಯಿಯ ಸಾಂಬಾರು ತಿಂದದ್ದನ್ನು ಹೊರಗಡೆ ಎಲ್ಲಾದರೂ ಹೇಳಿಬಿಟ್ಟರೆ ತಲೆ ಹೋಗುತ್ತದೆಯೆಂಬ ಭಯದಿಂದ ಮಗನಿಗೆ ಕೊಡಬೇಡ ಎಂದು ತೆನಾಲಿರಾಮ ಹೇಳುತ್ತಾನೆ. ಹೆಂಡತಿಯ ಒತ್ತಾಯಕ್ಕೆ ಮಣಿದ ತೆನಾಲಿರಾಮ ಒಂದು ಉಪಾಯ ಹೂಡುತ್ತಾನೆ. ಒಂದು ಬಕೆಟ್ ತುಂಬಾ ನೀರನ್ನು ತೆಗೆದುಕೊಂಡು ಉಪ್ಪರಿಗೆಯಲ್ಲಿ ಮಲಗಿದ್ದ ಮಗನ ಮೇಲೆ ನೀರನ್ನು ಪೂರ್ತಿ ಸುರಿದು, 'ನೋಡು ಮಗಾ ಮಳೆ ಜೋರಾಗಿ ಬರುತ್ತಿದೆ, ಎದ್ದೇಳು ಊಟ ಮಾಡು ಬಾ' ಎಂದು ಎಬ್ಬಿಸಿ ಕೆಳಗೆ ಕರೆದುಕೊಂಡು ಬರುತ್ತಾನೆ. ಒದ್ದೆಯಾಗಿದ್ದ ಬಟ್ಟೆಯನ್ನು ಬದಲಾಯಿಸಿ, ಬದನೆಕಾಯಿ ಸಾಂಬರನ್ನು ಬಡಿಸಿ ಊಟ ಮಾಡಿಸುತ್ತಾನೆ. ಮಗ ನಿದ್ದೆಯಲ್ಲೇ ಖುಷಿಯಿಂದ ಊಟ ಮಾಡುತ್ತಾನೆ.

ನಂತರ ಮತ್ತೆ ತೆನಾಲಿರಾಮ ಹೊರಗಡೆ ಮಳೆ ಬರುತ್ತಿದೆ ನೀನು ಒಳಗೆ ಮಲಗಿಕೋ ಎಂದು ಮತ್ತೆ ಮಗನನ್ನು ಮಲಗಿಸುತ್ತಾನೆ. ಬೆಳಗಾಗುತ್ತಿದ್ದಂತೆ ಅರಮನೆಯ ತೋಟದಿಂದ ಎರಡು ಬದನೆಕಾಯಿ ಕಳುವಾಗಿರುವ ವಿಚಾರ ಅರಮನೆಯಲ್ಲಿ ಬಹು ದೊಡ್ಡ ಸುದ್ದಿಯಾಯಿತು. ಈ ಕೆಲಸ ಬುದ್ಧಿವಂತನಾದ ತೆನಾಲಿರಾಮ ಬಿಟ್ಟರೆ ಬೇರೆ ಯಾರೂ ಮಾಡಲಸಾಧ್ಯವೆಂದು ರಾಜ ನಿರ್ಧರಿಸುತ್ತಾನೆ. ಆದರೆ ತೆನಾಲಿರಾಮ ಬುದ್ಧಿವಂತಿಕೆ ಉಪಯೋಗಿಸಿ ತಪ್ಪಿಸಿಕೊಳ್ಳುತ್ತಾನೆ ಎಂದು ಅರಿತ ರಾಜ ನೇರವಾಗಿ ಆತನ ಮಗನನ್ನು ಆಸ್ಥಾನಕ್ಕೆ ಕರೆಸಿದರೆ ಆತ ಸತ್ಯ ಹೇಳುತ್ತಾನೆಂದು ಮಗನನ್ನು ಕರೆಸುತ್ತಾನೆ. ರಾತ್ರಿ ರುಚಿಯಾದ ಬದನೆ ಸಾಂಬಾರಿನ ಊಟ ಮಾಡಿರುವುದನ್ನು ಮಗ ಒಪ್ಪಿಕೊಂಡಾಗ ರಾಜನು ತೆನಾಲಿರಾಮನ ಶಿರಚ್ಛೇದ ಮಾಡಲಷ್ಟೇ ಬಾಕಿ ಉಳಿದಿತ್ತು.

ಆಗ ತೆನಾಲಿರಾಮ ಸ್ವಾಮೀ ನನ್ನ ಮಗ ಕನಸಿನಲ್ಲಿ ಏನೇನೋ ಕನವರಿಸುತ್ತಾನೆ, ಆತನ ಮಾತನ್ನು ನಂಬಬೇಡಿ ಎನ್ನುತ್ತಾ ಬೇಕಿದ್ದರೆ ನಿನ್ನೆ ಮಳೆ ಬಂದಿತ್ತಲ್ಲವೇ ಎಂದು ನೀವೇ ಕೇಳಿ ಎಂದು ರಾಜನಿಗೆ ಹೇಳುತ್ತಾನೆ. ರಾಜನು ಇದೇ ಪ್ರಶ್ನೆಯನ್ನು ಮಗನಿಗೆ ಕೇಳುತ್ತಾನೆ.

ಅದಕ್ಕೆ ಉತ್ತರಿಸಿದ ತೆನಾಲಿರಾಮನ ಮಗ ಹೌದು ಸ್ವಾಮಿ ನಿನ್ನೆ ರಾತ್ರಿ ಜೋರಾಗಿ ಮಳೆ ಬಂದಿತ್ತು, ನಾನು ಮಳೆಗೆ ಒದ್ದೆಯಾಗಿದ್ದ ಬಟ್ಟೆ ಬದಲಿಸಿ ನಂತರ ಒಳಗಡೆ ಕೋಣೆಯಲ್ಲಿ ಮಲಗಿದೆ ಎಂದು ಹೇಳುತ್ತಾನೆ. ನಿನ್ನೆ ರಾತ್ರಿ ಮಳೆಯೇ ಬಂದಿಲ್ಲ ಇವನ ಮಗನು ಭ್ರಮೆಯಿಂದ ಏನೇನೋ ಮಾತನಾಡುತ್ತಾನೆ ಎಂದರಿತ ಕೃಷ್ಣದೇವರಾಯನು ತೆನಾಲಿರಾಮ ಕಳ್ಳನಲ್ಲ ಎಂದು ನಿರ್ಧರಿಸಿ ಆತನನ್ನು ಅಪರಾಧಿಯಲ್ಲವೆಂದು ಸಾರಿ ಎರಡು ಬದನೆಕಾಯಿಯನ್ನು ಉಡುಗೊರೆಯಾಗಿ ನೀಡಿ ಕಳುಹಿಸುತ್ತಾನೆ.



ನೀತಿ: ಉಪಾಯ ಹಾಗೂ ಬುದ್ಧಿವಂತಿಕೆಯಿದ್ದರೆ ಎಂತಹ ಗಂಡಾಂತರದಿಂದಲೂ ಪಾರಾಗಬಹುದು.

# ಅಪರಿಚಿತರೊಂದಿಗೆ ಮಾತು ಆರಂಭಿಸುವುದು ಹೇಗೆ?

ಉದಯರಶ್ಮಿ ದಿನಪತ್ರಿಕೆ




● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ಜಯ್ ನುಡಿ

ನಮ್ಮಲ್ಲಿ ಬಹುತೇಕ ಜನರು ಗುರಿ ಮುಟ್ಟದೇ ವಿಫಲರಾಗಲು ಕಾರಣ ಸಂವಹನ ಕಲೆ ಗೊತ್ತಿಲ್ಲದೇ ಇರುವುದು. ಅದರಲ್ಲೂ ಅಪರಿಚಿತರೊಂದಿಗೆ ಮಾತನಾಡಲು ಭಯಗೊಳ್ಳುವುದು ಸಾಮಾನ್ಯ. ಮಾತಿನ ಕಲೆ ತಲೆ ಎತ್ತಿ ನಡೆಯುವುದನ್ನು ದೈರ್ಯವನ್ನು ತುಂಬುತ್ತದೆ. ಕರಗತ ಮಾಡಿಕೊಂಡರೆ ಅಪರಿಚಿತರೊಂದಿಗೆ ಮಾತು ಹೇಗೆ ಆರಂಭಿಸಬೇಕೆಂಬುದು ಸಲೀಸಾಗಿ ಬಿಡುತ್ತದೆ. ನಾಲ್ಕಾರು ಜನರ ಗುಂಪಿನಲ್ಲಿರುವಾಗ ಏನು ಮಾತನಾಡುವುದೆಂದು ತಿಳಿಯದೆ ಆ ಕಡೆ ಈ ಕಡೆ ನೋಡುತ್ತ ನಿಂತು ಬಿಡುತ್ತೇವೆ. ಅವರಲ್ಲಿ ನಾವೂ ಒಬ್ಬರೆಂಬ ಭಾವನೆ ಬರದೇ ಅವರ ಇರುವಿಕೆಯನ್ನು ಸಂತಸದಿಂದ ಕಳೆಯದೆ ಪೇಚಾಡುತ್ತೇವೆ. ಉಸಿರುಗಟ್ಟಿದ ವಾತಾವರಣದಲ್ಲಿ ನಿಂತಂತೆನಿಸಿ ಅಲ್ಲಿಂದ ಹೊರ ನಡೆದರೆ ಸಾಕೆಂದು ಅನಿಸುವುದೂ ಉಂಟು. ಅಂಥ ಸಮಯದಲ್ಲಿ ನೀವೂ ಅವರಲ್ಲೊಬ್ಬರು ಅಂತೆನಿಸಲು ಹೇಗೆ ಮಾತನಾಡಬೇಕೆಂದು ಯೋಚಿಸುತ್ತೀರಿ, ಆದರೆ ಮಾತನಾಡಿ ಏನಾದರೂ ತಪ್ಪಾದರೆಂದು ಬಾಯಿ ಮುಚ್ಚಿಕೊಂಡಿರುತ್ತೀರಿ. ನಡೆಯುತ್ತಿರುವ ಸಂಭಾಷಣೆಯಲ್ಲಿ ನೀವೂ ಭಾಗ ತೆಗೆದುಕೊಳ್ಳಬೇಕೆಂದರೆ ಏನು ಮಾಡಬೇಕೆಂಬುದಕ್ಕೆ ಇಲ್ಲಿವೆ ಕೆಲವು ಸಲಹೆಗಳು.

* ಸಾಮಾನ್ಯವಾದುದನ್ನು ಹುಡುಕಿ

ನಡೆಯುತ್ತಿರುವ ಸಂಭಾಷಣೆಯನ್ನು ಗಮನವಿಟ್ಟು ಕೇಳಬೇಕು. ಚಟುವಟಿಕೆಗಳನ್ನು ಗಮನಿಸಬೇಕು. ಅದರಲ್ಲಿ ಕೆಲವೊಂದು ಅಂಶಗಳು ನಿಮ್ಮಲ್ಲಿ ಮತ್ತು ಅವರಲ್ಲಿ ಸಾಮಾನ್ಯವಿರುವ ಅಂಶಗಳು ಇದ್ದೇ ಇರುತ್ತವೆ. ಧರಿಸಿರುವ ಬಟ್ಟೆ, ಪಾದರಕ್ಷೆ,ವಾಚ್, ಗಾಗಲ್ ಹೀಗೆ ಇನ್ನೂ ಮುಂತಾದವುಗಳು. ಮೈಗೆ ಪೂಸಿದ ಸುಗಂಧವೂ ಆಗಿರಬಹುದು. ಚೆನ್ನಾಗಿದೆ ಎಲ್ಲಿ ಖರೀದಿಸಿದಿರೆಂದು ಕೇಳಬಹುದು. ಹಿಡಿದುಕೊಂಡಿರುವ ಪುಸ್ತಕದ ಬಗ್ಗೆ ಅವರು ಮಾತನಾಡುತ್ತಿದ್ದರೆ, ಅವರಿಗೆ ಓದಿನ ಗೀಳಿದೆಯೆಂದು ತಿಳಿದು ಬಂದರೆ ಪುಸ್ತಕದ ಕುರಿತಾಗಿ ನಿಮ್ಮ ಮಾತನ್ನು ಆರಂಭಿಸಬಹುದು. ಒಂದು ವೇಳೆ ಅವರು ಮೇಲಿಂದ ಮೇಲೆ ಟಿವಿ ಪರದೆಯತ್ತ ಲಕ್ಷ್ಯ ಹರಿಸುತ್ತಿದ್ದರೆ ಅವರಿಗೆ ಕ್ರಿಕೆಟ್ ಇಲ್ಲವೇ ಧಾರಾವಾಹಿ ಸಿನೆಮಾದ ಬಗ್ಗೆ ಪ್ರಶ್ನೆಗಳನ್ನು ಕೇಳಿ ನಿಮ್ಮ ಇಷ್ಟವನ್ನು ಅದಕ್ಕೆ ಸೇರಿಸಬಹುದು. ಅಲ್ಲಿಂದ ನಿಮ್ಮ ಸಂಭಾಷಣೆ ಆರಂಭಿಸಬಹುದು. ನಿಮ್ಮ ಪರಿಚಯ ಖುಷಿ ತಂತು ಎಂದು ನಗುತ್ತ ಒಂದು ಧನ್ಯವಾದ ಹೇಳಿ. ಅಂತಿಮವಾಗಿ ನಾವೆಲ್ಲ ಮಾನವರು ಮಾನವೀಯ ಭಾವನೆಗಳನ್ನು ಸೂಕ್ಷ್ಮವಾಗಿ ಅವಲೋಕಿಸಿದರೆ ಉತ್ತಮ ಮಾತುಗಾರರು ಆಗಲು ಸಾಧ್ಯ.



* ಕುತೂಹಲದ ಪ್ರಶ್ನೆಗಳನ್ನು ಕೇಳಿ

ನೀವು ಹೇಗಿದಿರಿ? ಯಾವ ಊರು? ಈಗ ಇರುವುದು ಎಲ್ಲಿ? ಹೀಗೆ ಬಹುತೇಕ ಸಲ ನಾವು ಇಂಥ ಚಿಕ್ಕಪುಟ್ಟ ಪ್ರಶ್ನೆಗಳನ್ನು ಕೇಳುತ್ತೇವೆ. ಇಲ್ಲವೇ ಹೌದು ಅಥವಾ ಇಲ್ಲ ಎಂದು ಉತ್ತರಿಸುವ ಪ್ರಶ್ನೆಗಳನ್ನು ಕೇಳುತ್ತೇವೆ. ಇದರಿಂದ ಎದುರಿಗಿನವರು ಚೇಳು ಕಡಿದಂತೆ ಅದಕ್ಕಷ್ಟೇ ಉತ್ತರಿಸಿ ಸುಮ್ಮನಾಗಿ ಬಿಡುತ್ತಾರೆ. ಆಮೇಲೆ ನೀರವ ಮೌನ. ಸಂಭಾಷಣೆಯಲ್ಲಿ ತೊಡಗಿಸಿಕೊಳ್ಳಬೇಕೆಂದಿರುವ ನೀವು ಎಂಥ ಪ್ರಶ್ನೆಗಳನ್ನು ಕೇಳಬೇಕೆಂದರೆ ಎದುರಿನವರು ಮುಕ್ತವಾಗಿ ಉತ್ತರಿಸಬೇಕು. ಹೆಚ್ಚು ಹೆಚ್ಚು ವಿವರಿಸಿ ತಮ್ಮದನ್ನು ಹೇಳಿಕೊಳ್ಳುವ ಪ್ರಶ್ನೆಗಳನ್ನು ಕೇಳಬೇಕು. ಉದಾಹರಣೆಗೆ, ಈ ಉದ್ಯೋಗದಲ್ಲಿ ತೊಡಗಿಸಿಕೊಳ್ಳಲು ಯಾವುದು ನಿಮ್ಮನ್ನು ಸೆಳೆಯಿತು? ವೃತ್ತಿ ಮತ್ತೆ ಮನೆಕೆಲಸ ಅದೆಷ್ಟು ಚೆನ್ನಾಗಿ ಹೇಗೆ ನಿಭಾಯಿಸುತ್ತೀರಿ? ಹೀಗೆ ವೃತ್ತಿ ಮತ್ತು ಕೌಟಂಬಿಕ ಪ್ರಶ್ನೆಗಳು ಅವರು ಮುಕ್ತವಾಗಿ ಮಾತನಾಡುವಂತೆ ಪ್ರೇರೇಪಿಸುತ್ತವೆ. ಹವ್ಯಾಸ ಅಭಿರುಚಿ ಬಗೆಗೆ ಕೇಳಿದರಂತೂ ಮುಗಿದೇ ಹೋಯಿತು, ಬಲು ಆಸಕ್ತಿಯಿಂದ ತೆರೆದ ಹೃದಯದಿಂದ ಹಂಚಿಕೊಳ್ಳಲು ಶುರು ಮಾಡುತ್ತಾರೆ. ನಿಮ್ಮ ಕಿವಿ ಮತ್ತು ಧ್ಯಾನ ಅಲ್ಲಿಯೇ ಇರುವಂತೆ ನೋಡಿಕೊಳ್ಳಬೇಕು. ನಡುನಡುವೆ ಹ್ಞೂಂ ಹೌದಾ? ಹೀಗೇನು? ವಾವ್! ಎನ್ನುತ್ತ ಉತ್ತೇಜಿಸಬೇಕು. ಹೀಗಾದಾಗ ಸಂಭಾಷಣೆ ಬೆಳೆಯುವುದು ಮತ್ತು ಅವರು ನಿಮಗೆ ಪರಿಚಿತರಾಗುವರು. ಪ್ರತಿಯೊಬ್ಬರ ಜೀವನದಲ್ಲೂ ಹಂಚಿಕೊಳ್ಳಲು ಅನುಭವಗಳು ಕಥೆಗಳು ಇದ್ದೇ ಇರುತ್ತವೆ. ಅವುಗಳನ್ನು ಹೇಳುವಂತೆ ಪ್ರಚೋದಿಸುವುದೇ ಉತ್ತಮ ಮಾತುಗಾರನ ಲಕ್ಷಣ. 'ಪ್ರತಿಯೊಬ್ಬರೂ ತಮ್ಮದನ್ನು ಹೇಳಿಕೊಳ್ಳಲು ಉತ್ಸುಕರಾಗಿರುತ್ತಾರೆ ಹೊರತು ನಮ್ಮದನ್ನು ಕೇಳಲು ಅಲ್ಲ.' ಎಂಬುದು ನೆನಪಿರಲಿ.

ಅಭಿಪ್ರಾಯ ವ್ಯಕ್ತಪಡಿಸಿ

ನೀವೆಲ್ಲಿರುವಿರೋ ಅಲ್ಲಿಯದೇ ಒಂದು ಸನ್ನಿವೇಶವನ್ನು ತೆಗೆದುಕೊಂಡು ಸಂಭಾಷಣೆ ಆರಂಭಿಸಬಹುದು. ಯಾವುದೇ ಪಾರ್ಟಿಯಲ್ಲಿ ಇಲ್ಲವೇ ಮಾಲ್‌ನಲ್ಲಿ ಹೋದಾಗ ತೇಲಿ ಬರುತ್ತಿರುವ ಸಂಗೀತ ಕ್ಲಾಸಿಕ್ ಆಗಿದ್ದರೆ ಇಲ್ಲವೇ ಸೌಂಡ್ ಹೆಚ್ಚಾಗಿದ್ದರೆ ಸಂದರ್ಭಕ್ಕೆ ತಕ್ಕಂತೆ ನಿಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿ ಸಂಭಾಷಣೆ ಶುರು ಮಾಡಬಹುದು. ಯಾವುದೇ ಸಭೆ ಸಮಾರಂಭದಲ್ಲಿರುವಾಗ ಅಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಮಾತನಾಡಬಹುದು. ಸಿನಿಮಾ ರಾಜಕೀಯ ಹವಾಮಾನದಂತಹ ಸಾಮಾನ್ಯ ವಿಚಾರಗಳ ಕುರಿತಾಗಿಯೂ ಮಾತು ಆರಂಭಿಸುವುದು ಮೊದಲಿನಿಂದಲೂ ನಡೆದುಕೊಂಡು ಬಂದಿದೆ.


* ಪ್ರಾಮಾಣಿಕ ಮೆಚ್ಚುಗೆ

ಪ್ರತಿಯೊಬ್ಬರೂ ತಮ್ಮನ್ನು ಇತರರು ಮೆಚ್ಚಿಕೊಳ್ಳಲಿ ಎಂದು ಬಯಸುತ್ತಾರೆ. ಆದರೆ ಅದು ಕೃತ್ರಿಮವಾಗಿರಬಾರದೆಂದು ಹೊಗಳಿಕೆಯಾಗಿರಬಾರದೆಂದು ಬಯಸುತ್ತಾರೆ. ಪರಿಚಯ ಮಾಡಿಕೊಳ್ಳಲು ಮೊದಲಿನ ಮಾತಿನಲ್ಲೇ ಹೊಗಳಿದರೆ ಮುಂದಿನವರು ಇವರು ಯಾವುದೇ ಉದ್ದೇಶಕ್ಕೆ ನನ್ನನ್ನು ಮಾತಿಗೆಳೆಯುತ್ತಿದ್ದಾರೆಂದು ತಿಳಿದುಕೊಳ್ಳುತ್ತಾರೆ. ಒಂದು ವೇಳೆ ಅವರಲ್ಲಿಯ ಒಳ್ಳೆಯದನ್ನು ಮೆಚ್ಚಿಕೊಂಡು ಮಾತನಾಡಿಸಿದರೆ ನಿಜವಾಗಲೂ ನಿಮ್ಮತ್ತ ಆಕರ್ಷಿತರಾಗುತ್ತಾರೆ. ಅಪರಿಚಿತರಲ್ಲಿ ಒಮ್ಮೆಲೇ ಮೆಚ್ಚುಗೆಯನ್ನು ವ್ಯಕ್ತಪಡಿಸಲು ಗುಣಗಳನ್ನು ಹೇಗೆ ಕಂಡುಕೊಳ್ಳುವ ಎನ್ನುವ ಸವಾಲಿಗೆ ಜವಾಬು ಸೂಕ್ಷ್ಮ ಅವಲೋಕನವಷ್ಟೇ. ಉದ್ಯಮಿ ಚಾರ್ಲ್ಸ್ ಶೋವಾಬ್ ಹೇಳಿದಂತೆ 'ಮೆಚ್ಚುಗೆಯಲ್ಲಿ ಮನಸಾರೆ ಹೊಗಳಿಕೆಯಲ್ಲಿ ಧಾರಾಳಿ.' ಆಗಿರಿ. ಟೀಕಿಸುವ ದೂಷಿಸುವ ದೂರುವ ಮಾತುಗಳು ಬೇಡ. ಬದಲಾಗಿ ಅವರನ್ನು ಅರ್ಥೈಸಿಕೊಂಡು ಮಾತನಾಡಿ.



* ಹಿಂದಿನ ಸಂಭಾಷಣೆ

ಈಗಾಗಲೇ ಎಲ್ಲೋ ಒಂದೆರಡು ಸಲ ಭೇಟಿಯಾಗಿದ್ದರೆ ಮಾತು ಆರಂಭಿಸಲು ತಡಬಡಾಯಿಸುವ ಅವಶ್ಯಕತೆಯಿಲ್ಲ. ಹಿಂದೆ ಸಿಕ್ಕಾಗ ಮಾತನಾಡಿದ ಮಾತಿನ ಎಳೆಯನ್ನು ಹಿಡಿದು ಮಾತು ಆರಂಭಿಸಬಹುದು. ಹಿಂದಿನ ಭೇಟಿಯಲ್ಲಿ ವಿವರಿಸಿದ ಘಟನೆಯ ಬಗ್ಗೆ ಅಥವಾ ಅವರ ಗೆಳೆಯರ ಬಗ್ಗೆ ಇಲ್ಲವೇ ಕೆಲಸದ ಕುರಿತಾಗಿ ಮಾತನಾಡಿದ್ದನ್ನು ನೆನಪಿಸಿ ಮಾತಿಗೆಳೆದರೆ ಅವರಿಗಾಗುವ ಖುಷಿ ಅಷ್ಟಿಷ್ಟಲ್ಲ. ನೀವು ಅವರ ವಿಷಯಗಳನ್ನು ಇನ್ನೂ ನೆನಪಿಟ್ಟುಕೊಂಡಿದ್ದೀರಿ ಅವರ ಬಗ್ಗೆ ನಿಮಗೆ ಒಳ್ಳೆಯ ಅಭಿಪ್ರಾಯವಿದೆಯೆಂದು ನೀವು ಕೇಳುವ ಮುನ್ನವೇ ತಾವೇ ಮುಂದಾಗಿ ಸ್ನೇಹ ಹಸ್ತ ಚಾಚುತ್ತಾರೆ.



* ಕೊನೆ ಹನಿ

ಮಾತು ಕೇವಲ ಶಬ್ದಗಳ ಗುಂಪಲ್ಲ. ನೀವು ಆರಿಸುವ ಶಬ್ದಗಳು ನಿಮ್ಮ ವ್ಯಕ್ತಿತ್ವವನ್ನು ಕಟ್ಟುತ್ತವೆ. ಬೆಳೆಸುತ್ತವೆ. ಆಯ್ಕೆ ಮಾಡುವ ಶಬ್ದಗಳ ಬಗ್ಗೆ ಕಾಳಜಿ ಇರಲೇಬೇಕು. ಸಂವಹನ ಕಲೆಗೆ ಬೆಲೆ ಕಟ್ಟಲಾಗದು. ಎದುರಿಗಿದ್ದವರ ಪ್ರತಿ ಅಪಾರ ಗೌರವವಿರಿಸಿ ಮಾತನಾಡುವುದು ನಮ್ಮ ಗೌರವವನ್ನೂ ಹೆಚ್ಚಿಸುತ್ತದೆಂಬುದನ್ನು ಮರೆಯುವಂತಿಲ್ಲ. ವಿನಸ್ಟನ್ ಚರ್ಚಿಲ್ ಹೇಳಿದಂತೆ 'ಒಳ್ಳೆಯ ಮಾತುಗಾರನಾಗಬೇಕೆಂದರೆ ಒಳ್ಳೆಯ ಕೇಳುಗನಾಗಬೇಕು.' ಆಲಿಸುವ ಕಿವಿಗಳು ಚುರುಕಾದರೆ ಆಡುವ ಬಾಯಿಯೂ ಚುರುಕಾಗುತ್ತದೆ ಬದುಕಿನುದ್ದಕ್ಕೂ ಸವಿ ಅಮೃತ ಉಣ್ಣುವ ಭಾಗ್ಯವೂ ನಮ್ಮದಾಗುತ್ತದೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR